ಸಂಪುಟ : 8 ಸಂಚಿಕೆ : 223 ಪುಟ : 4 ಬೆಲೆ : 3.00 ಮಂಗಳವಾರ ಅಕ್ಟೋಬರ್ 10, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ






Volume : 8 Issue : 223 Pages : 4 Price : 3.00 Tuesday October 10, 2023 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗದಗ-ಬೆಟಗೇರಿ ಅವಳಿ ನಗರದಲ್ಲಿ ಇಂದು ನೀರು ಪೂರೈಕೆ ಎಲ್ಲೆಲ್ಲಿ?



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ಅಕ್ಟೋಬರ್ 10 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

**ಸ್ಥಳಗಳ ವಿವರ:** ವಾರ್ಡ್ ನಂ. 26 ಹಳೆ ಬಸ್ ಸ್ಟ್ಯಾಂಡ್ ಲೈನ್, ದನದ ದವಾಖಾನೆ ಲೈನ್, ಲಕ್ಷ್ಮಿ ಚಾಳ್, ಉರ್ದು ಶಾಲೆ ಹಿಂದೆ, ಕಬಾಡಿಯವರ ಲೈನ್, ಬೂಸ್ತ ಅವರ ಲೈನ್, ಬೇವಿನಕಟ್ಟಿಯ ಲೈನ್ ಭಾಗ-1 ಭಾಗ-2 ಜನತಾ ಕಿರಾಣಿ ಲೈನ್, ವಾರ್ಡ್ ನಂ. 28 ದೇವಗಿರಿ ಮಾಸ್ತರ್ ಲೈನ್, ಸಂತೋಷ ಕಿರಾಣಿ ಅಂಗಡಿ ಲೈನ್, ಅಪಾಟ್ಮೆರ್‌ಂಟ್ ಲೈನ್, ಎಸ್ ಎಸ್ ಪಾಟೀಲ್‌ರ ಲೈನ್, ಕೊರ್ಲಹಳ್ಳಿ ಮಾಸ್ತರ ಲೈನ್, ಅಬ್ಬಿಗೇರಿಯವರ ಲೈನ್, ಕಾಗದಗಾರ ಲೈನ್, ಗವಾಯಿಗಳ ಆಶ್ರಮ ಮುಂದಿನ ಭಾಗ. ವಾರ್ಡ್ ನಂ. 3 ಜಮಾದಾರ ನಗರ, ಸುರಣ್ಣವರ ಪ್ಲಾಟ್, ಬ್ಯಾಳಿಯವರ ಲೈನ್, ರಾಣಾ ಪ್ರತಾಪ್ ಸಿಂಗ್ ಲೈನ್, ಮಸೂತಿ ಹಿಂದಿನ ಭಾಗ, ಮುಂದಿನ ಭಾಗ, ಈಶ್ವರ ಗುಡಿ ಲೈನ್, ಸ್ವಾಮಿಯರ ಲೈನ್. ವಾರ್ಡ್ ನಂ. 22 ಟವರ್ ಕಂಬ, ಶಿಗ್ಗಾವಿ ಕುರುಗಲ್ ಲೇಔಟ್, ವಾಲ್ಮೀಕಿ ಭವನ, ಗಂಗಿಮಡಿ ಲಿಡ್ಕರ್ ಬಡಾವಣೆ, ವಾರ್ಡ್ ನಂ. 5, 6 ಪನಿಬಂದ್ ಓಣಿ, ತಟ್ಟಿ ಅವರ ಲೈನ್, ನಾವಳ್ಳಿ ಅವರ ಲೈನ್, ಮಳಲಿ ಪೂಜಾರ್ ರವರ ಲೈನ್, ಮಾಕಾಪುರ ಲೈನ್, ವಾರ್ಡ್ ನಂ. 11 ನಿಸರ್ಗ ಬಡಾವಣೆ, ಅಬ್ದುಲ್ ಕಲಾಂ ಮಂದಿರ ರೋಡ್, ರಿಂಗ್ ರೋಡ್ ಮುಂದಿನ ಭಾಗ, ಮಸೂತಿ ಲೈನ್, ಶಿವಬಸವ ನಗರ, ಗಾರ್ಡನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 30, 35, 33 ವಡ್ಡರಗೇರಿ, ಮೂರು ಶಿಳ್ಳಿನ ವಕಾರ 46 ಪ್ಲಾಟ್, ವಡ್ಡರಿಗೇರಿ ಕೆಳಗಿನ ಭಾಗ- ಮೇಲಿನ ಭಾಗ, ಚೆನ್ನಮ್ಮ ಸರ್ಕಲ್, ಕುಂಚಿ ಕೊರವರ ಓಣಿ, ಬಸ್ ಡಿಪೋ ಹಿಂದಿನ ಭಾಗ, ವಾರ್ಡ್ ನಂ. 20, 16, 21, 23 ರಹಮತ್ ನಗರ ಭಾಗ 1, 2, 3, 4, ಗುಡದೂರ ಸ್ವಾಮಿ ಮಠ ಎಡಗಡೆ ಭಾಗ-ಬಲಗಡೆ ಭಾಗ, ಅಬ್ಬಿಗೇರಿ ಲೈನ್, ಕೊಂಬೇಶ್ವರ ನಗರ 4 ಭಾಗಗಳು, ಸಿಟಿಹಾಲ್, ಹಾಳದಿಬ್ಬ, ಕರಿ ದೇವರ ಗುಡಿ ಲೈನ್, ಪುಣೇಕರ ಲೈನ್, ಬಂಡಿಯವರ ಲೈನ್, 2 ನೇ ಸ್ಕೂಲ್ ಲೈನ್ ಕೆಲವು ಉಳಿದ ಭಾಗಗಳು. ತಾಂತ್ರಿಕವಾಗಿ ನೀರು ಪೂರೈಕೆಯಲ್ಲಿ ಒಂದು ವೇಳೆ ಅಡತಡೆಯಾದಲ್ಲಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕೆಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಶಿರಹಟ್ಟಿಯಲ್ಲಿ ಜಿಲ್ಲಾಧಿಕಾರಿಗಳಿಂದ ಜನತಾ ದರ್ಶನ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರ ಅಧ್ಯಕ್ಷತೆಯಲ್ಲಿ ತಾಲೂಕು ಮಟ್ಟದ ಜನತಾ ದರ್ಶನ ಕಾರ್ಯಕ್ರಮವು ಶಿರಹಟ್ಟಿಯ ತಾಲೂಕು ಪಂಚಾಯತ ಸಭಾಂಗಣದಲ್ಲಿ ಅಕ್ಟೋಬರ್ 10 ಮಂಗಳವಾರ ಮಧ್ಯಾಹ್ನ 2 ಗಂಟೆಯಿಂದ ಜರುಗಲಿದೆ.

ಸಾರ್ವಜನಿಕರ ಅಹವಾಲುಗಳನ್ನು ತಾಲೂಕು ಮಟ್ಟದಲ್ಲಿಯೇ ಆಲಿಸಿ ಸೂಕ್ತ ಪರಿಹಾರ ಒದಗಿಸುವ ನಿಟ್ಟಿನಲ್ಲಿ ತಾಲೂಕು ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜನತಾ ದರ್ಶನ ಕಾರ್ಯಕ್ರಮ ಹಮ್ಮಿಕೊಂಡು ಜನರ ಅಹವಾಲುಗಳನ್ನು ಆಲಿಸಿ ಸಮಸ್ಯೆಗಳಿಗೆ ಪರಿಹಾರೋಪಾಯುಗಳನ್ನು ಒದಗಿಸಲಾಗುವದು. ಜನತಾ ದರ್ಶನ ಕಾರ್ಯಕ್ರಮದಲ್ಲಿ ತಾಲೂಕಿನ ಸಾರ್ವಜನಿಕರು ಭಾಗವಹಿಸಿ ತಮ್ಮ ಅಹವಾಲುಗಳನ್ನು ಸಲ್ಲಿಸಿ ಸಮಸ್ಯೆಗಳಿಗೆ ಪರಿಹಾರವನ್ನು ಕಂಡುಕೊಳ್ಳಬಹುದಾಗಿದ್ದು, ಶಿರಹಟ್ಟಿ ತಾಲೂಕು ಪಂಚಾಯತ ಸಭಾಂಗಣದಲ್ಲಿ ಮುಂಜಾನೆ 11 ಗಂಟೆಯಿಂದ ಸಾರ್ವಜನಿಕರು ತಮ್ಮ ಅಹವಾಲುಗಳನ್ನು ಸಲ್ಲಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಅ. 17ರವರೆಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಮುಂಡರಗಿ ತಾಲೂಕಿನಲ್ಲಿ ಖಾಲಿ ಇರುವ 05 ಅಂಗನವಾಡಿ ಕಾರ್ಯಕರ್ತೆಯರ ಹಾಗೂ 25 ಅಂಗನವಾಡಿ ಸಹಾಯಕಿಯರ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದೆ. ಸದರಿ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆಗಳನ್ನು ಅಕ್ಟೋಬರ್ 17ರವರೆಗೆ (ಸಾರ್ವಜನಿಕ ರಜೆಗಳನ್ನು ಹೊರತುಪಡಿಸಿ) ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಮುಂಡರಗಿ ಇಲ್ಲಿ ಲಿಖಿತ ರೂಪದಲ್ಲಿ ಸೂಕ್ತ ಪೂರಕ ದಾಖಲೆಗಳೊಂದಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಮುಂಡರಗಿ ತಾಲೂಕಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

## ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಫೆಲೋಶಿಪ್ ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

2023-24ನೇ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಇವರಿಂದ ಅಲ್ಪಸಂಖ್ಯಾತರ ಪಿ.ಎಚ್.ಡಿ/ಎಂ.ಫಿಲ್ ವಿದ್ಯಾರ್ಥಿಗಳಿಗೆ ಫೆಲೋಶಿಪ್‌ಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಹಾಗೂ ಅರ್ಹ ಅಲ್ಪಸಂಖ್ಯಾತರ (ಮುಸ್ಲಿಂ, ಜೈನ್, ಕ್ರಿಶ್ಚಿಯನ್, ಸಿಖ್, ಬೌದ್ಧ, ಪರ್ಶಿಯನ್) ವಿದ್ಯಾರ್ಥಿಗಳು ಸೇವಾಸಿಂಧು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನವನ್ನು ಅಕ್ಟೋಬರ್ 31 ರವರೆಗೆ ವಿಸ್ತರಿಸಲಾಗಿದೆ.

ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಗಳನ್ನು ಖುದ್ದಾಗಿ ಅಭ್ಯರ್ಥಿಗಳೇ ಹಾಜರಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ರವರ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಮೌಲಾನಾ ಆಜಾದ ಭವನ, ಜಿಲ್ಲಾ ನ್ಯಾಯಾಲಯದ ಎದುರುಗಡೆ, ಗದಗ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.

**ನರಗುಂದದಲ್ಲಿ 500 ಕೋಟಿ ರೂ. ಹಗರಣ ಆರೋಪ | ಸತ್ಯಾಸತ್ಯತೆ ಅರಿಯಲು ಅ.11,12 ರಂದು ಆಗಮಿಸುವ ತನಿಖಾ ತಂಡ- ಮಾಜಿ ಶಾಸಕ ಬಿ.ಆರ್. ಯಾವಗಲ್ ಮಾಹಿತಿ**

# ಹಗರಣದ ತನಿಖೆಗಾಗಿ ನರಗುಂದಕ್ಕೆ ತನಿಖಾ ತಂಡ

■ವಿಜಯಸಾಕ್ಷಿ ಸುದ್ದಿ, ಗದಗ

ನರಗುಂದ ಮತಕ್ಷೇತ್ರದ ವ್ಯಾಪ್ತಿಯಲ್ಲಿ 2022-23ನೇ ಸಾಲಿನಲ್ಲಿ ನಡೆದ ಅಂದಾಜು 500 ಕೋಟಿ ರೂ.ಗಳ ಅಭಿವೃದ್ಧಿ ಕಾಮಗಾರಿಗಳ ಅನುಷ್ಠಾನದಲ್ಲಿ ಆಗಿರುವ ಲೋಪದೋಷಗಳ ತನಿಖೆ ನಡೆಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆದೇಶಿಸಿದ್ದಾರೆ ಎಂದು ನರಗುಂದ ಮತಕ್ಷೇತ್ರದ ಮಾಜಿ ಶಾಸಕ ಬಿ.ಆರ್ ಯಾವಗಲ್ ತಿಳಿಸಿದರು.



ನಗರದ ಪತ್ರಿಕಾ ಭವನದಲ್ಲಿ ಸೋಮವಾರ ಕರೆದಿದ್ದ ಸುದ್ದಿಗೋಷ್ಠಿಯುನ್ನುದ್ದೇಶಿಸಿ ಮಾತನಾಡಿದ ಅವರು, ಲೋಕೋಪಯೋಗಿ, ಗ್ರಾಮೀಣಾಭಿವೃದ್ಧಿ-ಪಂಚಾಯತ್ ರಾಜ್ ಇಲಾಖೆ, ಸಣ್ಣ ನೀರಾವರಿ, ಜಲಸಂಪನ್ಮೂಲ ಮತ್ತು ಪೌರಾಡಳಿತ ಇಲಾಖೆ ಅಡಿಯಲ್ಲಿ ನಡೆದ ಕಾಮಗಾರಿಗಳಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರಗಳ ತನಿಖೆ ನಡೆಸುವಂತೆ 30.6.2023ರಂದು ಸಿಎಂ ಸಿದ್ದರಾಮಯ್ಯ ಅವರಿಗೆ ಪತ್ರ ಬರೆಯಲಾಗಿತ್ತು. ಇದೀಗ, ಲೋಕೋಪಯೋಗಿ ಇಲಾಖೆಯ ಮುಖ್ಯ ಇಂಜಿನಿಯರ್ ಅಧ್ಯಕ್ಷತೆಯಲ್ಲಿ ತನಿಖಾ ಸಮಿತಿ ರಚಿಸಲಾಗಿದ್ದು, ಲೋಕೋಪಯೋಗಿ ಇಲಾಖೆ ವಿಚಕ್ಷಣ ದಳದ ಅಧೀಕ್ಷಕ ಇಂಜಿನಿಯರ್ ಮತ್ತು ಕಾರ್ಯಪಾಲಕ ಇಂಜಿನಿಯರ್ ಒಳಗೊಂಡ ಸಮಿತಿ ಈ ಅವ್ಯವಹಾರಗಳ ಆರೋಪದ ಸತ್ಯಾಸತ್ಯತೆಯ ಕುರಿತು ತನಿಖೆ ನಡೆಸಲಿದೆ ಎಂದರು.

> ನರಗುಂದದಲ್ಲಿ ರಾಜ್ಯ ಹೆದ್ದಾರಿ ಪ್ರಾಧಿಕಾರದ 31 ಕೋಟಿ ರೂ. ಪ್ಯಾಕೇಜ್ ಕಾಮಗಾರಿಯನ್ನು ನಿಯಮ ಮೀರಿ ಟೆಂಡರ್ ಮಾಡಲಾಗಿದೆ. ನಕಲಿ 'ವರ್ಕ್ ಡನ್' ಸರ್ಟಿಫಿಕೇಟ್ ಮೂಲಕ ಟೆಂಡರ್ ಪಡೆದಿರುವ ಮಾಹಿತಿಯಿದ್ದು, ತನಿಖೆಯಿಂದ ಅದು ಸ್ಪಷ್ಟವಾಗಲಿದೆ. ನನ್ನ ಸೋಲಿಗೆ ಕಾರಣರಾದವರು ಸಕ್ರಿಯ ರಾಜಕಾರಣದಲ್ಲಿದ್ದಾರೆ. ಹೊಂದಾಣಿಕೆ ರಾಜಕಾರಣವೂ ಇದೆ. ಆ ಕುರಿತಾದ ನನ್ನ ಹೇಳಿಕೆಗೆ ಬದ್ಧನಾಗಿದ್ದೇನೆ.
> **- ಬಿ.ಆರ್ ಯಾವಗಲ್.**
> ಮಾಜಿ ಶಾಸಕರು, ನರಗುಂದ.

ಈ ಸಮಿತಿ ಇದೇ ಅ.11, 12ರಂದು ಕ್ಷೇತ್ರದಲ್ಲಿ ಸಂಚಾರ ನಡೆಸಿ, ಅವ್ಯವಹಾರದ ▸▸3ನೇ ಪುಟಕ್ಕೆ

### ಚುನಾವಣೆ ಸಮಯದಲ್ಲಿ ಯಾಕೆ ಸುಮ್ಮನಿದ್ದರು?



ಕಳೆದ ವಿಧಾನಸಭಾ ಚುನಾವಣೆಯ ಸಂದರ್ಭದಲ್ಲಿ ಕಾಂಗ್ರೆಸ್‌ನವರು ಮೌನವಾಗಿದ್ದಾರೆ. ಕಾಮಗಾರಿ ಆಗಿಲ್ಲ ಎಂದು ಹೇಳಿಲ್ಲ. ಹಾಗಾದರೆ ಈಗೇಕೆ ಕಾಮಗಾರಿಯಲ್ಲಿ ಅವ್ಯವಹಾರ ನಡೆದಿದೆಯೆಂದು ಆರೋಪ ಮಾಡುತ್ತಿದ್ದಾರೆ ಎಂದು ಮಾಜಿ ಸಚಿವ ಸಿ.ಸಿ ಪಾಟೀಲ ಪ್ರಶ್ನೆ ಮಾಡಿದ್ದಾರೆ.

ನರಗುಂದದಲ್ಲಿ ವಿವಿಧ ಕಾಮಗಾರಿಗಳಲ್ಲಿ 500 ಕೋಟಿ ರೂ. ಹಗರಣ ನಡೆದಿದೆ ಎಂದು ಕಾಂಗ್ರೆಸ್ ಮುಖಂಡರ ಆರೋಪದ ಕುರಿತು ಖಾಸಗಿ ಸುದ್ದಿವಾಹಿನಿಯೊಂದಕ್ಕೆ ಪ್ರತಿಕ್ರಿಯಿಸಿದ ಶಾಸಕ ಸಿ.ಸಿ ಪಾಟೀಲ, ಸಿಎಂ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದೇನೆ.

ಸದ್ಯಕ್ಕೆ ಈ ವಿಷಯದ ಕುರಿತು ಹೆಚ್ಚೇನೂ ಮಾತನಾಡುವುದಿಲ್ಲ. ಎರಡು ದಿನಗಳ ಬಳಿಕ ಪತ್ರಿಕಾಗೋಷ್ಠಿ ನಡೆಸಿ ಎಲ್ಲ ವಿಷಯಗಳನ್ನೂ ಹೇಳುತ್ತೇನೆ ಎಂದು ಪ್ರತಿಕ್ರಿಯಿಸಿದರು.

**ಅಭೂತಪೂರ್ವ ಸುವರ್ಣ ಸಂಭ್ರಮ ಕಾರ್ಯಕ್ರಮಕ್ಕೆ ರೂಪುರೇಷೆ ಸಿದ್ಧಪಡಿಸಲು ಸಚಿವ ಎಚ್.ಕೆ. ಪಾಟೀಲ ಸೂಚನೆ**

# 'ಕರ್ನಾಟಕ' ನಾಮಕರಣಕ್ಕೆ 50ರ ಸಂಭ್ರಮ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಎಂದು ನಾಮಕರಣಗೊಂಡು 50 ವರ್ಷ ಪೂರೈಸುತ್ತಿರುವ ಹಿನ್ನಲೆಯಲ್ಲಿ ಜಿಲ್ಲೆಯಲ್ಲಿ ಸುವರ್ಣ ಸಂಭ್ರಮದ ಕಾರ್ಯಕ್ರಮವನ್ನು ಅಭೂತಪೂರ್ವವಾಗಿ ಆಯೋಜಿಸಲು ರೂಪುರೇಷೆಗಳನ್ನು ಸಿದ್ಧಪಡಿಸುವಂತೆ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರದಂದು ಜರುಗಿದ ಕರ್ನಾಟಕ ನಾಮಕರಣಕ್ಕೆ 50 ವರ್ಷ ಪೂರೈಸಿದರ ಹಿನ್ನಲೆಯಲ್ಲಿ ಆಯೋಜಿಸಲಾಗುವ ಸುವರ್ಣ ಸಂಭ್ರಮದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕರ್ನಾಟಕ ನಾಮಕರಣಕ್ಕೆ 50 ವರ್ಷ ಪೂರೈಸುತ್ತಿರುವ ಹಿನ್ನಲೆಯಲ್ಲಿ ರಾಜ್ಯಾದ್ಯಂತ ಸುವರ್ಣ ಸಂಭ್ರಮ ಆಚರಿಸಲಾಗುತ್ತಿದೆ. 50 ವರ್ಷಗಳ ಹಿಂದೆ ನಗರದ ಕಾಟನ ಸೇಲ್ ಸೊಸೈಟಿ ಆವರಣದಲ್ಲಿ ಜರುಗಿದ ಐತಿಹಾಸಿಕ ಸಮಾವೇಶವನ್ನು ಮೆಲುಕು ಹಾಕುವದರ ಜೊತೆಗೆ ಸ್ವರ್ಣ ಮಹೋತ್ಸವ ಆಚರಣೆ ಯಶಸ್ವಿಗೊಳಿಸಲು ಅಧಿಕಾರಿಗಳು ವಿಶೇಷ ಮುತುವರ್ಜಿಯಿಂದ ಕಾರ್ಯನಿರ್ವಹಿಸುವಂತೆ ತಿಳಿಸಿದರು.

ಜಿಲ್ಲೆಯಲ್ಲಿ ನವೆಂಬರ್ 3 ರಂದು ಜರುಗಲಿರುವ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಆಗಮಿಸಲಿದ್ದಾರೆ. ಮುಖ್ಯಮಂತ್ರಿಗಳನ್ನು ಹಂಪಿಯಿಂದ ಗದುಗಿಗೆ ಗೋಲ್ಡನ್ ಚಾರಿಯೆಟ್ ರೈಲಿನ ಮೂಲಕ ಕರೆತರಲು ಚಿಂತಿಸಲಾಗುತ್ತಿದೆ. ನ.03 ರಂದು ಗದುಗಿಗೆ ಆಗಮಿಸುವ ಮುಖ್ಯಮಂತ್ರಿಗಳು, ವೀರನಾರಾಯಣ ದೇವಸ್ಥಾನಕ್ಕೆ ತೆರಳಿ ಪೂಜೆ ಸಲ್ಲಿಸುವ ಮೂಲಕ ಜ್ಯೋತಿಯೊಂದಿಗೆ ಮೆರವಣಿಗೆ ಮೂಲಕ ನಗರದ ಕಾಟನ್ ಸೇಲ್ ಸೊಸೈಟಿಗೆ ಆಗಮಿಸಲು ಉದ್ದೇಶಿಸಲಾಗಿದೆ. ▸▸3ನೇ ಪುಟಕ್ಕೆ

## ನಾಳೆ ಲಕ್ಷ್ಮೇಶ್ವರದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಅಪರ ಪೊಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ನಿರ್ದೇಶನದಂತೆ ಕರ್ನಾಟಕ ಲೋಕಾಯುಕ್ತ, ಗದಗ ಕಚೇರಿಯ ಪೊಲೀಸ್ ಅಧಿಕಾರಿಗಳು ಅಕ್ಟೋಬರ್ 11 ರಂದು ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ತಹಸೀಲ್ದಾರ ಕಚೇರಿ ಸಭಾಭವನ ಲಕ್ಷ್ಮೇಶ್ವರದಲ್ಲಿ ಲೋಕಾಯುಕ್ತ ಜನಸಂಪರ್ಕ ಸಭೆ ಮತ್ತು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಸದರಿ ದಿನಾಂಕದಂದು ಸಾರ್ವಜನಿಕರಿಂದ ದೂರು/ಅಹವಾಲುಗಳನ್ನು ಸ್ವೀಕರಿಸಲಾಗುವುದು ಎಂದು ಗದಗ ಕರ್ನಾಟಕ ಲೋಕಾಯುಕ್ತ ಆರಕ್ಷಕ ಉಪ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಟ್ಟಡ ಬಾಡಿಗೆ ನೀಡುವ ಮಾಲೀಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

2023-24ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಮುಂಡರಗಿ ಪಟ್ಟಣದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಮುಂಡರಗಿ ಪುರಸಭೆ ವ್ಯಾಪ್ತಿಯಲ್ಲಿ 120 ವಿದ್ಯಾರ್ಥಿಗಳ ವಸತಿ ಸಾಮಾರ್ಥ್ಯ ಹೊಂದಿರುವ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒಳಗೊಂಡಿರುವ ಬಾಡಿಗೆ ಕಟ್ಟಡ ಅವಶ್ಯವಿದೆ.

ಸದರಿ ಕಟ್ಟಡವನ್ನು ಬಾಡಿಗೆ ನೀಡುವ ಮಾಲೀಕರು ತುರ್ತಾಗಿ ಪ್ರಾಂಶುಪಾಲರು, ಮೊರಾರ್ಜಿ ದೇಸಾಯಿ ವಸತಿ ಶಾಲೆ, ಉಸ್ತಾದ ಪ್ಲಾಟ್, ಸ್ವಾಮಿ ವಿವೇಕಾನಂದ ನಗರ, ಮುಂಡರಗಿ ಅವರನ್ನು ಅಕ್ಟೋಬರ್ 16 ರೊಳಗಾಗಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಈರುಳ್ಳಿಗೆ ಬೆಂಬಲ ಬೆಲೆ ಘೋಷಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಈರುಳ್ಳಿ ಬೆಳೆಗೆ ಬೆಲೆಗೆ ಸೂಕ್ತ ಬೆಂಬಲ ಬೆಲೆ ಇಲ್ಲದಂತಾಗಿದೆ. ಸರ್ಕಾರ ಕೂಡಲೇ ಈರುಳ್ಳಿಗೆ ಸೂಕ್ತ ಬೆಂಬಲ ಬೆಲೆ ಘೋಷಿಸಿ ರೈತರ ಹಿತ ಕಾಪಾಡಬೇಕು ಎಂದು ಈರುಳ್ಳಿ ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಸಿದ್ದೇಶ್ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯುನ್ನುದ್ದೇಶಿಸಿ ಮಾತನಾಡಿದ ಅವರು, ಇತ್ತೀಚೆಗೆ ಕೇಂದ್ರದ ಅದ್ಯಯನ ತಂಡ ಜಿಲ್ಲೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದೆ. ಆದಷ್ಟು ಬೇಗ ಈರುಳ್ಳಿ ಸೇರಿದಂತೆ ಎಲ್ಲ ಬೆಳೆಗಳಿಗೂ ಎಕರೆಗೆ 35 ಸಾವಿರ ರೂ. ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು.

ಈಗಾಗಲೇ ಬಿತ್ತಿದ ಬೆಳೆಗೆ ವಿಮೆ ಬಂದಿಲ್ಲ. ಆದಷ್ಟು ಬೇಗ ಬೆಳೆ ವಿಮೆ ಬಿಡುಗಡೆ ▸▸3ನೇ ಪುಟಕ್ಕೆ

# ಇಂದು 'ನಮೋ ಬ್ರಿಗೇಡ್' ಬೈಕ್ ರ್‍ಯಾಲಿ

■ವಿಜಯಸಾಕ್ಷಿ ಸುದ್ದಿ, ಗದಗ

ನಮೋ ಬ್ರಿಗೇಡ್ ವತಿಯಿಂದ 'ಜನಗಣಮನ ಬೆಳೆಸೋಣ' ಕಾರ್ಯಕ್ರಮದ ಹಿನ್ನೆಲೆಯಲ್ಲಿ ಅ.11 ರಂದು ಬೈಕ್ ರ್‍ಯಾಲಿ ಹಮ್ಮಿಕೊಳ್ಳಲಾಗಿದೆ ಎಂದು ನಮೋ ಬ್ರಿಗೇಡ್ ಕಾರ್ಯಕರ್ತ ಶರಣು ಅಂಗಡಿ ಹೇಳಿದರು.



ಸೋಮವಾರ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯುನ್ನುದ್ದೇಶಿಸಿ ಮಾತನಾಡಿದ ಅವರು, ಕಳೆದ 10 ವರ್ಷಗಳ ಕೇಂದ್ರ ಸರ್ಕಾರದ ಸಾಧನೆಯನ್ನು ಮನೆ ಮನೆಗೆ ತಲುಪಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ. ಔಷಧಿ ಮಾಫಿಯಾ, ಖೋಟಾನೋಟು ಮಾಫಿಯಾ ಇತ್ಯಾದಿಗಳ ಮೂಲಕ ಕೇಂದ್ರ ಸರ್ಕಾರವನ್ನು ಸೋಲಿಸುವ ಹುನ್ನಾರ ನಡೆದಿದೆ. ಈ ಎಲ್ಲ ದುಷ್ಟ ಶಕ್ತಿಗಳಿಂದ ಭಾರತೀಯರ ರಕ್ಷಣೆ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರ ಬೆಂಬಲಕ್ಕೆ ಈ ಬೈಕ್ ರ್‍ಯಾಲಿ ನಡೆಯಲಿದೆ ಎಂದರು.

ಲಕ್ಕುಂಡಿಯಿಂದ ಬೈಕ್ ರ್‍ಯಾಲಿ ಆರಂಭಗೊಳ್ಳಲಿದ್ದು, ಹಾತಲಗೇರಿ ಗ್ರಾಮ, ಬೆಟಗೇರಿ, ಗಾಂಧಿ ವೃತ್ತ ಸೇರಿದಂತೆ ವಿವಿಧ ಮುಖ್ಯ ರಸ್ತೆಗಳಲ್ಲಿ ಸಂಚರಿಸಿ, ಮುಳಗುಂದ ನಾಕಾ ಮೂಲಕ ಧಾರವಾಡ ಜಿಲ್ಲೆಯ ಅಣ್ಣಿಗೇರಿ ▸▸3 ನೇ ಪುಟಕ್ಕೆ

**ಮದ್ಯವರ್ಜನ ಕೇಂದ್ರಗಳ ಮೂಲಕ ಪೂಜ್ಯ ಹೆಗ್ಗಡೆ ಅವರು ಸಾಕಷ್ಟು ಜನರನ್ನು ವ್ಯಸನ ಮುಕ್ತರಾಗಿಸಿದ್ದಾರೆ-ಸಚಿವ ಎಚ್.ಕೆ.ಪಾಟೀಲ**

# ವ್ಯವಸಮುಕ್ತ ಕನಸು ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯಿಂದ ನನಸು



■ವಿಜಯಸಾಕ್ಷಿ ಸುದ್ದಿ, ಗದಗ

ಲಕ್ಷಾಂತರ ಕುಟುಂಬಗಳು ನೆಮ್ಮದಿಯಿಂದ ಬದುಕು ಕಟ್ಟಿಕೊಳ್ಳಬೇಕು ಎಂದು ಪೂಜ್ಯ ವಿರೇಂದ್ರ ಹೆಗ್ಗಡೆ ಅವರು ಮದ್ಯವರ್ಜನ ಕೇಂದ್ರಗಳ ಮೂಲಕ ಸಾಕಷ್ಟು ಜನರನ್ನು ವ್ಯಸನ ಮುಕ್ತರಾಗಿಸಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.



ನಗರದ ಕೆ.ಎಚ್.ಪಾಟೀಲ ಸಭಾಭವನದಲ್ಲಿ ಸೋಮವಾರ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿಸಿ ಟ್ರಸ್ಟ್, ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ಟ್ರಸ್ಟ್ ಬೆಳ್ತಂಗಡಿ, ಅಖಿಲ ಕರ್ನಾಟಕ ಜಿಲ್ಲಾ ಜನಜಾಗೃತಿ ವೇದಿಕೆ ಜಿಲ್ಲಾ ಘಟಕ ಹಾಗೂ ಜಿಲ್ಲಾ ಪೊಲೀಸ್ ಇಲಾಖೆ ಸಹಯೋಗದಲ್ಲಿ ಗಾಂಧಿ ಜಯಂತಿ ಅಂಗವಾಗಿ ಗಾಂಧಿಸ್ಮೃತಿ, ವ್ಯಸನಮುಕ್ತ ಸಾಧಕರಿಗೆ ಅಭಿನಂದನೆ ಮತ್ತು ಪದಗ್ರಹಣ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ವ್ಯವಸಮುಕ್ತ ಕನಸನ್ನು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ನನಸು ಮಾಡುತ್ತಿದೆ. ದುಶ್ಚಟಗಳಿಂದ ಕುಟುಂಬವು ಆರ್ಥಿಕ ಸಂಕಷ್ಟದ ▸▸3ನೇ ಪುಟಕ್ಕೆ

## ಸಾಕ್ಷಿ ಸುಭಾಷಿತ

ಒಳ್ಳೆಯ ಕೆಲಸಗಳನ್ನು ಮಾಡುವುದು ಹಾಗೂ ಬೇರೇಯವರು ಅದನ್ನು ಮಾಡುವಂತೆ ಪ್ರೇರೇಪಿಸುವುದು ಮನುಷ್ಯನ ಕರ್ತವ್ಯವಾಗಿದೆ.

–ಕುರಾನ್

## ಸಂಪಾದಕೀಯ

# ಸರ್ಕಾರಿ ಶಾಲೆಗಳಿಗೆ ಸಿಗಲ್ಲ ಕಾಯಕಲ್ಪ

ರಾಜ್ಯದಲ್ಲಿ ಪ್ರತಿವರ್ಷ ಎಸ್ಎಸ್ಎಲ್‌ಸಿ ಮತ್ತು ಪಿಯುಸಿ ಫಲಿತಾಂಶ ಪ್ರಕಟಗೊಂಡಾಗ ಸರ್ಕಾರಿ ಶಾಲೆಯಲ್ಲಿ ಓದಿದ ಮಕ್ಕಳೇ ಹೆಚ್ಚು ಅಂಕಗಳನ್ನು ಗಳಿಸಿರುತ್ತಾರೆ. ಅದರಲ್ಲೂ ಕನ್ನಡ ಮಾಧ್ಯಮದಲ್ಲಿ ಅಭ್ಯಾಸ ಮಾಡಿದ ಮಕ್ಕಳ ಫಲಿತಾಂಶ ಗಮನಾರ್ಹವಾಗಿರುತ್ತದೆ.

ಅಂತ ಸಂದರ್ಭದಲ್ಲಿ ಸರ್ಕಾರಿ ಶಾಲೆಗಳು ನೆನಪಾಗುತ್ತವೆ. ಸರ್ಕಾರಿ ಶಾಲೆಗಳ ಬಗ್ಗೆ ಹೆಮ್ಮೆ ಎನಿಸುತ್ತದೆ. ಖಾಸಗಿ ಶಾಲೆಯಲ್ಲಿ ಮತ್ತು ಟ್ಯೂಷನ್ ಪಡೆದ ಮಕ್ಕಳ ಫಲಿತಾಂಶವನ್ನು ಸರ್ಕಾರಿ ಶಾಲೆ ಮಕ್ಕಳ ಫಲಿತಾಂಶದ ಜೊತೆಗೆ ಹೋಲಿಕೆ ಮಾಡಿ ಚರ್ಚಿಸುವ ಸಂದರ್ಭವು ಒದಗಿ ಬರುತ್ತದೆ.

ಆದರೆ ಸರ್ಕಾರಿ ಶಾಲೆಗಳ ಸ್ಥಿತಿಗತಿಗಳ ಬಗ್ಗೆ ಮಾತ್ರ ಅಷ್ಟಾಗಿ ಚರ್ಚೆಯಾಗಲ್ಲ. ಯಾಕೆಂದರೆ ಸರ್ಕಾರಿ ಶಾಲೆ ಎನ್ನುವುದು ಬಡವರ ಮಕ್ಕಳಿಗೆ ಮಾತ್ರ ಸೀಮಿತ ಎನ್ನುವುದು ಜನಜನಿತವಾಗಿದೆ.

ಇದಕ್ಕೆ ಮುಖ್ಯ ಕಾರಣ ಸರ್ಕಾರಿ ಶಾಲೆಗಳ ಅವ್ಯವಸ್ಥೆ. ಇವತ್ತಿಗೂ ಅನೇಕ ಸರ್ಕಾರಿ ಶಾಲೆಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಲು ಸಾಧ್ಯವಾಗಿಲ್ಲ. ಕನಿಷ್ಠ ಕುಡಿಯುವ ನೀರು, ಶೌಚಾಲಯ ಇಲ್ಲದಂತಹ ಶಾಲೆಗಳ ಸಂಖ್ಯೆ ರಾಜ್ಯದಲ್ಲಿ ಸಾವಿರ ದಾಟಿದೆ. ಕರ್ನಾಟಕದ ಹೈಕೋರ್ಟ್ ಸಹ ರಾಜ್ಯ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದೆ. ಸರ್ಕಾರಿ ಶಾಲೆಗಳಿಗೆ ಮೂಲಸೌಕರ್ಯ ಕಲ್ಪಿಸಲು ಯಾಕೆ ವಿಳಂಬ ಎಂದು ಪ್ರಶ್ನಿಸಿದೆ. ಇಷ್ಟೆಲ್ಲಾ ಆದರೂ ಸರ್ಕಾರಿ ಶಾಲೆಗಳು ಮಾತ್ರ ಖಾಸಗಿ ಶಾಲೆಗಳಿಗೆ ಪೈಪೋಟಿ ನೀಡುವಂತೆ ಬೆಳೆಯಲು ಸಾಧ್ಯವೇ ಇಲ್ಲ. ಇದಕ್ಕೆ ಮುಖ್ಯ ಕಾರಣ ಅಧಿಕಾರದಲ್ಲಿರುವ ಬಹುತೇಕ ರಾಜಕಾರಣಿಗಳು ತಮ್ಮದೇ ಆದ ಶಿಕ್ಷಣ ಸಂಸ್ಥೆಗಳನ್ನು ಹೊಂದಿದ್ದಾರೆ. ಮಠಾಧೀಶರು ಅನೇಕ ಸಂಸ್ಥೆಗಳನ್ನು ನಡೆಸುತ್ತಿದ್ದಾರೆ. ಅವರ್‍ಯಾರಿಗೂ ಸರ್ಕಾರಿ ಶಾಲೆಗಳು ಉನ್ನತೀಕರಣಗೊಳ್ಳುವುದು ಬೇಕಿಲ್ಲ. ಸರ್ಕಾರಿ ಶಾಲೆಗಳು ಹೆಚ್ಚು ಸಮೃದ್ಧವಾದಷ್ಟು ಖಾಸಗಿ ಶಾಲೆಗಳಿಗೆ ಕಂಟಕವಾಗುತ್ತವೆ. ಹೀಗಾಗಿ ರಾಜ್ಯ ಸರ್ಕಾರ ಶಾಲೆಗಳ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ ಮಾಡುವುದಿಲ್ಲ. ಜನಾಕ್ರೋಶ ಎಷ್ಟೆ ವ್ಯಕ್ತವಾದರೂ, ಹೈಕೋರ್ಟ್ ತರಾಟೆಗೆ ತೆಗೆದುಕೊಂಡರು ಸರ್ಕಾರಿ ಶಾಲೆಗಳು ಸುಧಾರಣೆ ಆಗುವುದಿಲ್ಲ.

ಸರ್ಕಾರದ ಈ ಅಸಡ್ಡೆ ಬದಲಾಗಬೇಕಾದರೆ ಜನ ಸಮುದಾಯ ಎಚ್ಚೆತ್ತುಕೊಳ್ಳಬೇಕು. ಸರಕಾರಿ ಶಾಲೆ ಕೇವಲ ಬಡವರ ಮಕ್ಕಳ ಶಾಲೆಯಲ್ಲ, ಅದು ನಮ್ಮೆಲ್ಲರ ಶಾಲೆ ಎನ್ನುವ ಮನೋಭಾವ ಬೆಳೆಯಬೇಕು. ವಿಪರ್ಯಾಸ ಎಂದರೆ ಆ ರೀತಿ ಮನಸ್ಥಿತಿ ಸೃಷ್ಟಿಯಾಗುವ ಸಾಧ್ಯತೆಗಳು ಸದ್ಯದ ಪರಿಸ್ಥಿತಿಯಲ್ಲಿ ಇಲ್ಲ. ಹೀಗಾಗಿ ಸರಕಾರಿ ಶಾಲೆಗಳ ಈಗಿನ ಸ್ಥಿತಿ ಹಾಗೆ ಇರಲಿದೆ.

## ಶ್ರೀ ರಂಭಾಪುರಿ ಜಗದ್ಗುರುಗಳ 32ನೇ ವರ್ಷದ ದಸರಾ ಧರ್ಮ ಸಮ್ಮೇಳನ

# ಲಿಂಗಸುಗೂರಿನಲ್ಲಿ ಅ.15ರಿಂದ 24ರವರೆಗೆ ಶರನ್ನವರಾತ್ರಿ



■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ರಾಯಚೂರು ಜಿಲ್ಲೆ ಲಿಂಗಸುಗೂರು ನಗರದ ಸರ್ಕಾರಿ ಜ್ಯೂನಿಯರ್ ಕಾಲೇಜು ಆವರಣದಲ್ಲಿ ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರುಗಳವರ ಸಾನ್ನಿಧ್ಯದಲ್ಲಿ 32ನೇ ವರ್ಷದ ದಸರಾ ಧರ್ಮ ಸಮ್ಮೇಳನ ಅ.15ರಿಂದ 24ರವರೆಗೆ ನಡೆಯುವುದೆಂದು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ತಿಳಿಸಿದರು.

ಅವರು ಭಾನುವಾರ ಶ್ರೀ ರಂಭಾಪುರಿ ಪೀಠದಲ್ಲಿ ದಸರಾ ಆಮಂತ್ರಣ ಪತ್ರಿಕೆ ಬಿಡುಗಡೆ ಮಾಡಿ, ಕಾರ್ಯಕ್ರಮದ ವಿವರ ನೀಡಿದರು.

ದಿನಾಂಕ 15ರಂದು ಮಾಜಿ ಮುಖ್ಯಮಂತ್ರಿ ಡಾ.ಬಿ.ಎಸ್ ಯಡಿಯೂರಪ್ಪ ಸಮಾರಂಭವನ್ನು ಉದ್ಘಾಟಿಸಲಿದ್ದು, ಅರಣ್ಯ ಮತ್ತು ಪರಿಸರ ಖಾತೆ ಸಚಿವ ಈಶ್ವರ ಖಂಡ್ರೆ, ಸಂಸದ ರಾಜಾ ಅಮರೇಶ್ವರ ನಾಯಕ, ಶಾಸಕರಾದ ಮಾನಪ್ಪ ವಜ್ಜಲ, ಡಾ. ಶಿವರಾಜ ಪಾಟೀಲ, ಹಂಪನಗೌಡ ಬಾದರ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಅ.24ರವರೆಗೆ ನಡೆಯುವ ದಸರಾ ಧರ್ಮ ಸಮ್ಮೇಳನದಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್, ಕೇಂದ್ರದ ಸಚಿವ ಭಗವಂತ ಖೂಬಾ, ರಾಜ್ಯದ ಸಚಿವರಾದ ಶಿವರಾಜ ತಂಗಡಗಿ, ಕೆ.ಎನ್ ರಾಜಣ್ಣ, ಬಿ.ನಾಗೇಂದ್ರ, ಎಂ.ಬಿ ಪಾಟೀಲ್, ಎನ್.ಎಸ್ ಭೋಸರಾಜ, ಡಾ.ಶರಣ ಪ್ರಕಾಶ ಪಾಟೀಲ, ಎಚ್.ಕೆ ಪಾಟೀಲ, ರಹೀಂಖಾನ, ಪ್ರಿಯಾಂಕ್ ಖರ್ಗೆ, ಶರಣಬಸಪ್ಪ ದರ್ಶನಾಪುರ, ಮಾಜಿ ಮುಖ್ಯಮಂತ್ರಿಗಳಾದ ಜಗದೀಶ ಶೆಟ್ಟರ್, ಬಸವರಾಜ ಬೊಮ್ಮಾಯಿ ಸೇರಿದಂತೆ ವಿವಿಧ ಗಣ್ಯರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

**ಉಪನ್ಯಾಸ:** ಸಮಾರಂಭದಲ್ಲಿ ಮಾನ್ವಿ ಹಿರೇಮಠದ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯರು, ಬಾಳೆಹೊನ್ನೂರು ಖಾಸಾ ಶಾಖಾಮಠ ಸಿದ್ಧರಬೆಟ್ಟ ಕ್ಷೇತ್ರದ ವೀರಭದ್ರ ಶಿವಾಚಾರ್ಯರು, ಕವಲೇದುರ್ಗ ಭುವನಗಿರಿ ಸಂಸ್ಥಾನಮಠದ ಮರುಳಸಿದ್ಧ ಶಿವಾಚಾರ್ಯರು, ನೆಗಳೂರು ಹಿರೇಮಠದ ಗುರುಶಾಂತೇಶ್ವರ ಶಿವಾಚಾರ್ಯರು, ಅಮ್ಮಿನಬಾವಿ ಪಂಚಗೃಹ ಹಿರೇಮಠದ ಅಭಿನವ ಶಾಂತಲಿಂಗ ಶಿವಾಚಾರ್ಯರು, ಎಮ್ಮಿಗನೂರು ಹಂಪಿ ಸಾವಿರ ದೇವರಮಠದ ವಾಮದೇವ ಮಹಂತ ಶಿವಾಚಾರ್ಯ ಸ್ವಾಮಿಗಳು, ಲಕ್ಷ್ಮೇಶ್ವರದ ಡಾ. ಜಯಶ್ರೀ ಮಲ್ಲಿಕಾರ್ಜುನ ಹೊಸಮನಿ, ತುಮಕೂರು ವಿ.ವಿ ನಿವೃತ್ತ ಉಪನ್ಯಾಸಕರಾದ ಡಾ. ಮೀನಾಕ್ಷಿ ಖಂಡಿಮಠ, ಸಂಶೋಧಕರಾದ ಡಾ. ಎ.ಸಿ ವಾಲಿ ಇವರು ವಿವಿಧ ವಿಷಯಗಳಲ್ಲಿ ಉಪನ್ಯಾಸ ನೀಡುವರು.

ಅ.ಭಾ.ವೀ.ಶಿವಾಚಾರ್ಯ ಸಂಸ್ಥೆ(ರಿ) ಗೌರವಾಧ್ಯಕ್ಷರಾದ ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು, ಅಧ್ಯಕ್ಷರಾದ ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳನ್ನು ಮೊದಲ್ಗೊಂಡು ಬಂಕಾಪುರ, ದೇವಾಪುರ, ಹಂಪಸಾಗರ, ಸುಳ್ಳ, ಶಿರಕೋಳ, ನಂದವಾಡಗಿ, ಹರಪನಹಳ್ಳಿ, ಜಾಲಹಳ್ಳಿ, ರಾಯಚೂರು, ಶ್ರೀನಿವಾಸ ಸರಡಗಿ, ಮಳಲಿ, ನಿಡಗುಂದಿ, ಚಳಗೇರಿ, ಮೈಸೂರು, ಕುಷ್ಟಗಿ, ಸೂಡಿ, ಆಲಮೇಲ ಸೇರಿದಂತೆ ವಿವಿಧ ಮಠಾಧೀಶರು ಭಾಗವಹಿಸುವರು.

**ಇಷ್ಟಲಿಂಗ ಮಹಾಪೂಜೆ:** ಲಿಂಗಸುಗೂರು ಶ್ರೀ ಈಶ್ವರ ದೇವಸ್ಥಾನದ ಆವರಣದಲ್ಲಿರುವ ಶ್ರೀ ವೀರಭದ್ರೇಶ್ವರ ಸಮುದಾಯ ಭವನದಲ್ಲಿ ಅ.15ರಿಂದ 24ರವರೆಗೆ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜೆ ನಡೆಸುವರು. 24ರ ಬೆಳಿಗ್ಗೆ ಇಷ್ಟಲಿಂಗ ಪೂಜೆಗೆ **ಶ್ರೀ ರಂಭಾಪುರಿ ಜಗದ್ಗುರುಗಳು ಸ್ವತ:** ಕುಂಭ ಹೊತ್ತು ಅಗ್ರೋದಕ ತರುವರು. 24ರ ಸಂಜೆ ಶ್ರೀ ರಂಭಾಪುರಿ ಜಗದ್ಗುರುಗಳು ಅಡ್ಡಪಲ್ಲಕ್ಕಿ ಮೂಲಕ ಆಗಮಿಸಿ ಶಮಿ ಸೀಮೋಲ್ಲಂಘನ ಪೂಜೆ ನೆರವೇರಿಸಿ ಮಾನವ ಧರ್ಮ ಮಂಟಪದಲ್ಲಿ ಶಾಂತಿ ಸಂದೇಶ ಅನುಗ್ರಹಿಸುವರು. ಅ. 14ರ ಸಂಜೆ 5 ಗಂಟೆಗೆ ಅಲಂಕೃತ ಸಾರೋಟ ಮೂಲಕ ಶ್ರೀ ರಂಭಾಪುರಿ ಜಗದ್ಗುರುಗಳ ಶುಭಾಗಮನವಾಗಲಿದ್ದು ಸ್ವಾಗತ ಸಮಾರಂಭ ನೆರವೇರಲಿದೆ.

ಸಮಾರಂಭದ ಯಶಸ್ಸಿಗಾಗಿ ದಸರಾ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನ ಸೇವಾ ಸಮಿತಿ ಗೌರವಾಧ್ಯಕ್ಷರಾದ ದೇವರಭೂಪುರ ಕ್ಷೇತ್ರ ಬೃಹನ್ಮಠದ ಅಭಿನವ ಗಜದಂಡ ಶಿವಾಚಾರ್ಯ ಸ್ವಾಮಿಗಳು, ಅಧ್ಯಕ್ಷರಾದ ಮಾನಪ್ಪ ವಜ್ಜಲ, ಪ್ರಧಾನ ಕಾರ್ಯದರ್ಶಿ ಮಾಜಿ ಸಚಿವ ಅಮರೇಗೌಡ ಪಾಟೀಲ ಬಯ್ಯಾಪುರ ಸೇರಿದಂತೆ ಸಮಿತಿಯ ಸರ್ವ ಸದಸ್ಯರು ಶ್ರಮಿಸುತ್ತಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶ್ರೀ ರಂಭಾಪುರಿ ಪೀಠದ ಸಂಪರ್ಕಾಧಿಕಾರಿ ಪ್ರಭುದೇವ ಕಲ್ಮಠ, ಲೆಕ್ಕಾಧಿಕಾರಿ ಸಂಕಪ್ಪನವರ, ಚಂದ್ರಶೇಖರ, ವಿಶ್ವನಾಥ ಹಾಗೂ ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಸಾಧಕರು ಇದ್ದರು.

ಈ ವರ್ಷದ ದಸರಾ ಧರ್ಮ ಸಮ್ಮೇಳನದಲ್ಲಿ 'ರಂಭಾಪುರಿ ಯುವ ಸಿರಿ' ಪ್ರಶಸ್ತಿಯನ್ನು ಸಿಂಧನೂರಿನ ವೀರೇಶ ಪಾಟೀಲ ಇವರಿಗೆ 'ಸಾಹಿತ್ಯ ಸಿರಿ', ಲಿಂಗಸುಗೂರಿನ ಮಲ್ಲಣ್ಣ ವಾರದ ಇವರಿಗೆ 'ವೀರಶೈವ ಸಿರಿ', ದೇವರಭೂಪುರ ಬೃಹನ್ಮಠದ ಅಭಿನವ ಗಜದಂಡ ಶಿವಾಚಾರ್ಯ ಸ್ವಾಮಿಗಳಿಗೆ 'ಸಾಧನ ಸಿರಿ', ಮಾಗಣಗೇರಿ ಬೃಹನ್ಮಠದ ಡಾ. ವಿಶ್ವಾರಾಧ್ಯ ಶಿವಾಚಾರ್ಯ ಸ್ವಾಮಿಗಳಿಗೆ 'ಶಿವಾಚಾರ್ಯ ರತ್ನ' ಪ್ರಶಸ್ತಿಯನ್ನು ಪ್ರದಾನ ಮಾಡಲಾಗುವುದು.

# ಪುನೀತ್ ಕೆರೆಹಳ್ಳಿ ಮೇಲೆ ಸುಳ್ಳು ಆರೋಪ: ಸರ್ಕಾರ ಕ್ಷಮೆ ಯಾಚಿಸಲು ಆಗ್ರಹ



■ವಿಜಯಸಾಕ್ಷಿ ಸುದ್ದಿ, ಗದಗ

ಹಿಂದೂ ಹೋರಾಟಗಾರ ಪುನೀತ್ ಕೆರೆಹಳ್ಳಿ ಅವರ ಮೇಲೆ ಗೂಂಡಾ ಕಾಯ್ದೆಯಡಿ ಆರೋಪ ಮಾಡಲಾಗಿದ್ದು, ಇದಕ್ಕೆ ಸೂಕ್ತ ಸಾಕ್ಷಿ ನೀಡಬೇಕು, ಇಲ್ಲದಿದ್ದರೆ ಕಾಂಗ್ರೆಸ್ ಸರ್ಕಾರ ಕ್ಷಮೆ ಯಾಚಿಸಬೇಕು ಎಂದು ಕ್ರಾಂತಿಸೇನಾ ಗದಗ ಜಿಲ್ಲಾ ಸಂಘಟನೆ ವತಿಯಿಂದ ಗದಗ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಸಂಘಟನೆಯ ಗದಗ ಜಿಲ್ಲಾ ಗೌರವ ಕಾರ್ಯದರ್ಶಿ ಪ್ರವೀಣ ಹಬೀಬ ಮಾತನಾಡಿ, ಪುನೀತ್ ಕೆರೆಹಳ್ಳಿ ಅವರ ಮೇಲೆ ಇಲ್ಲಸಲ್ಲದ ಆರೋಪವನ್ನು ಮಾಡಿ ಅವರನ್ನು 35 ದಿನಗಳ ಕಾಲ ಜೈಲಿನಲ್ಲಿ ಬಂಧಿಸಲಾಗಿತ್ತು. ಈಗ ಜಾಮೀನಿನ ಮೇಲೆ ಅವರನ್ನು ಬಿಡುಗಡೆ ಮಾಡಲಾಗಿದೆ. ಆದರೆ ಕಾಂಗ್ರೆಸ್ ಸರ್ಕಾರ ಪುನೀತ್ ಕೆರೆಹಳ್ಳಿ ಅವರ ಮೇಲೆ ಸುಳ್ಳು ಆರೋಪ ಮಾಡಿರುವುದನ್ನು ನಮ್ಮ ಸಂಘಟನೆ ವಿರೋಧಿಸುತ್ತದೆ ಎಂದರಲ್ಲದೆ, ಪುನೀತ್ ಕೆರೆಹಳ್ಳಿ 5 ದಿನಗಳಿಂದ ಉಪವಾಸ ಸತ್ಯಾಗ್ರಹ ಮಾಡುತ್ತಿದ್ದಾರೆ. ಅವರ ಜೀವಕ್ಕೆ ಹಾನಿಯಾದರೆ ಕಾಂಗ್ರೆಸ್ ಸರ್ಕಾರವೇ ಹೊಣೆಯಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಸಂಘಟನೆಯ ಪದಾಧಿಕಾರಿಗಳಾದ ಶಿವಕುಮಾರ್ ಕುಂಬಾರ್, ಸುಮಿತ್ ಕಬಾಡಿ, ಪವನ್ ಪುರದ್, ರಾಮು ಕಬಾಡಿ, ಪ್ರದೀಪ್ ಸುರೋದ್, ರಾಮ್ ನವಲಗುಂದ, ನಾಗರಾಜ್ ಪವಾರ, ಪವನ್ ಕಾಟವಾ, ಹುಚ್ಚಯ್ಯ, ಅರುಣ್, ಮಂಜು, ರಾಜು ನವಲಗುಂದ, ಸುನೀಲ್ ಅರಸಿದ್ಧಿ, ಶಿವರಾಂ ಟಿಕಂಧರ್, ವಿನಾಯಕ್ ಅರಸಿದ್ಧಿ ಮುಂತಾದವರಿದ್ದರು.

## ಗ್ರಾಮೀಣ ಭಾಗದಲ್ಲಿ ವಿದ್ಯುತ್ ಪೂರೈಕೆ ಸ್ಥಗಿತ: ರೈತರಿಂದ ರಾಜ್ಯ ಹೆದ್ದಾರಿಯಲ್ಲಿ ಪ್ರತಿಭಟನೆ

# ರೈತ ಮಕ್ಕಳ ಶಿಕ್ಷಣವನ್ನು ಕಸಿದುಕೊಳ್ಳಲು ಮುಂದಾದ ಹೆಸ್ಕಾಂ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಗ್ರಾಮೀಣ ಪ್ರದೇಶದ ಜಮೀನುಗಳಲ್ಲಿ ವಾಸಿಸುವ ರೈತರ ಮನೆಗಳಿಗೆ ವಿದ್ಯುತ್ ಪೂರೈಕೆ ಸ್ಥಗಿತಗೊಳಿಸಿದ ಹಿನ್ನೆಲೆಯಲ್ಲಿ ಗೌಡಗೇರಿ ಗ್ರಾಮದ ರೈತರು ಗಜೇಂದ್ರಗಡ–ಕುಷ್ಟಗಿ ಹೆದ್ದಾರಿ ಬಂದ್ ಮಾಡುವ ಮೂಲಕ ಪ್ರತಿಭಟನೆ ನಡೆಸಿದರು.

ರೈತರ ಜಮೀನುಗಳಿಗೆ ವಿದ್ಯುತ್ ಪೂರೈಕೆ ಮಾಡಿ ಎಂದರೆ ವಿದ್ಯುತ್ ಅಭಾವವಿದೆ ಎಂದು ಅಧಿಕಾರಿಗಳು ಹೇಳುತ್ತಾರೆ. ನಗರ ಪ್ರದೇಶದ ಫ್ಯಾಕ್ಟರಿಗಳಿಗೆ ಹಗಲು ರಾತ್ರಿ ವಿದ್ಯುತ್ ಪೂರೈಕೆ ಮಾಡುತ್ತಾರೆ. ಆದರೆ, ರೈತರ ಕೃಷಿ ಚಟುವಟಿಕೆಗಳಿಗೆ ಹಾಗೂ ಮನೆಗಳಿಗೆ ವಿದ್ಯುತ್ ನೀಡುತ್ತಿಲ್ಲ ಎಂದು ರೈತರು ಆಕ್ರೋಶ ವ್ಯಕ್ತಪಡಿಸಿದರು.

1ನೇ ತರಗತಿಯಿಂದ ಪದವಿವರೆಗೆ ಪರೀಕ್ಷೆಗಳು ನಡೆಯುತ್ತಿವೆ. ಸಂಜೆ 6ರಿಂದ 10ರವರೆಗೆ ವಿದ್ಯುತ್ ಪೂರೈಕೆ ಮಾಡಿ ಎಂದು ಮನವಿ ಮಾಡಿದರೂ ಸಹ ವಿದ್ಯುತ್ ಪೂರೈಕೆ ಸ್ಥಗಿತಗೊಳಿಸಿ ಹೆಸ್ಕಾಂ ರೈತರ ಮಕ್ಕಳ ಶಿಕ್ಷಣವನ್ನು ಕಸಿದುಕೊಳ್ಳಲು ಮುಂದಾಗಿದೆ ಎಂದು ಆರೋಪಿಸಿದರು.

ಗೌಡಗೇರಿ ಗ್ರಾಮದಲ್ಲಿ 400 ಮನೆಗಳಿಗೆ ಅನಿಯಮಿತವಾಗಿ ವಿದ್ಯುತ್ ಸ್ಥಗಿತಗೊಂಡಿದ್ದು, ಮಕ್ಕಳ ಶಿಕ್ಷಣದೊಂದಿಗೆ ಕಳೆದ 3 ದಿನಗಳಿಂದ ಚೆಲ್ಲಾಟವಾಡುತ್ತಿದ್ದಾರೆ ಎಂದು ಮಹಿಳೆಯರು ಆಕ್ರೋಶ ವ್ಯಕ್ತಪಡಿಸಿದರು.

ಮಧ್ಯ ಪ್ರವೇಶಿಸಿದ ಪೊಲೀಸ್ ಅಧಿಕಾರಿಗಳು ರಸ್ತೆಯಲ್ಲಿ ಪ್ರತಿಭಟನೆ ಮಾಡಿದರೆ ಸಂಚಾರಕ್ಕೆ ತೊಂದರೆಯಾಗುತ್ತದೆ, ಪ್ರತಿಭಟನೆ ಕೈಬಿಡುವಂತೆ ಮನವಿ ಮಾಡಲು ಮುಂದಾದರು. ಆದರೆ ಪ್ರತಿಭಟನಾಕಾರರು ನಾವು ರಸ್ತೆ ಬಿಟ್ಟು ತೆರಳುವದಿಲ್ಲ ಎಂದು ಪಟ್ಟು ಹಿಡಿದಾಗ ಪಿಎಸ್ಐ ಸೋಮನಗೌಡ ಗೌಡ್ರ ಮಧ್ಯಪ್ರವೇಶಿಸಿ ಪ್ರತಿಭಟನಾಕಾರ ರೈತರನ್ನು ಹೆಸ್ಕಾಂ ಗ್ರಿಡ್‌ನಲ್ಲಿ ಪ್ರತಿಭಟನೆ ಮಾಡಲು ತೆರಳುವಂತೆ ಸೂಚಿಸಿದರು.

ಪ್ರತಿಭಟನೆಯಿಂದಾಗಿ ಕೆಲಕಾಲ ರಸ್ತೆ ಸಂಚಾರ ಅಸ್ತವ್ಯಸ್ತಗೊಂಡಿತ್ತು. ಈ ವೇಳೆ ವೀರೇಶ ರಾಠೋಡ, ಕಳಕಪ್ಪ ಕಲ್ಗುಡಿ, ವೀರಪ್ಪ ದುಮ್ಮಾಳ, ಬಾಬು ಜಾನಾಯಿ, ಕರಿಯಪ್ಪ ಜಾನಾಯಿ, ಲಕ್ಷ್ಮಣ ಕಾಸಾಯಿ, ಖಾಜಾಸಾಬ ಮಾಲ್ದಾರ ಮುಂತಾದವರಿದ್ದರು.

# ಇನ್‌ಸ್ಪೈರ್ ಅವಾರ್ಡ್‌ನಲ್ಲಿ ರಾಷ್ಟ್ರ ಮಟ್ಟಕ್ಕೆ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಎಸ್‌ಕೆಆರ್‌ಕೆ ಸರ್ಕಾರಿ ಪ್ರೌಢಶಾಲೆಯ 10ನೇ ತರಗತಿ ವಿದ್ಯಾರ್ಥಿ ವಿಕಾಸ ಸಂಕನಗೌಡ್ರ ತಯಾರಿಸಿದ ಈರುಳ್ಳಿ ಎಲೆಯನ್ನು ಬೇರ್ಪಡಿಸಿ ಈರುಳ್ಳಿ ಗಡ್ಡೆಯನ್ನು ನೆಲದಿಂದ ತೆಗೆಯುವ ಯಂತ್ರದ ಮಾದರಿಯು ರಾಜ್ಯ ಮಟ್ಟದ ಸ್ಪರ್ಧೆಯಲ್ಲಿ ಪ್ರದರ್ಶಿತವಾಗಿ, ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿದೆ.

ಅ.9ರಿಂದ 11ರವರೆಗೆ ನವದೆಹಲಿಯಲ್ಲಿ ನಡೆಯಲಿರುವ ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿ ಈ ಪ್ರಾಜೆಕ್ಟ್‌ನ್ನು ಪ್ರದರ್ಶಿಸಲಿದ್ದಾರೆ.

ರಾಷ್ಟ್ರಮಟ್ಟಕ್ಕೆ ಆಯ್ಕೆಯಾದ ವಿದ್ಯಾರ್ಥಿ ವಿಕಾಸನನ್ನು ಎಸ್‌ಡಿಎಂಸಿ ಅಧ್ಯಕ್ಷ ಆನಂದ ಕುಲಕರ್ಣಿ, ವಿಜ್ಞಾನ ಶಿಕ್ಷಕಿ ಮಂಜುಳಾ ಜಾಧವ ಸೇರಿದಂತೆ ಎಲ್ಲ ಶಿಕ್ಷಕರು ಶುಭ ಹಾರೈಸಿದ್ದಾರೆ ಎಂದು ಮುಖ್ಯ ಶಿಕ್ಷಕ ಎಸ್.ಬಿ ನಿಡಗುಂದಿ ತಿಳಿಸಿದ್ದಾರೆ.

# ಇಸ್ರೋ ವಿಜ್ಞಾನಿ ಸುಧೀಂದ್ರ ಬಿಂದಗಿಯವರೊಂದಿಗೆ ಸಂವಾದ


■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಬಾಲ ವಿನಾಯಕ ವಿದ್ಯಾನಿಕೇತನ ಶಾಲೆಯಲ್ಲಿ ಮುಖ್ಯ ಅತಿಥಿಗಳಾದ ಇಸ್ರೋದ ನಿವೃತ್ತ ವಿಜ್ಞಾನಿ ಸುಧೀಂದ್ರ ಬಿಂದಗಿಯವರು 9 ಮತ್ತು 10ನೇ ತರಗತಿಯ ವಿದ್ಯಾರ್ಥಿಗಳೊಂದಿಗೆ ಚಂದ್ರಯಾನ–3ರ ಪ್ರಾತ್ಯಕ್ಷಿಕೆಯ ರಾಕೆಟ್ ವಿನ್ಯಾಸಗಳನ್ನು ತೋರಿಸುವುದರ ಮೂಲಕ ಚಂದ್ರನ ಅಂಗಳಕ್ಕೆ ಕರೆದೊಯ್ದರು.

ಚಂದ್ರಯಾನ 3ರ ಕಾರ್ಯಾಚರಣೆಯನ್ನು ವಿವರಿಸುವುದಲ್ಲದೆ, ಅದ್ಭುತ ಯಶಸ್ಸಿಗೆ ಇಸ್ರೋದ ವಿಜ್ಞಾನಿಗಳು ಎದುರಿಸಿದ ಸವಾಲುಗಳನ್ನು ಹಾಗೂ ಅದರ ಯಶೋಗಾಥೆಯನ್ನು ಸಾದರಪಡಿಸಿದರು. ಶಾಲೆಯ ಶೈಕ್ಷಣಿಕ ಪರಿಸರ, ಶಾಲೆಯ ಮೂಲ ಸೌಕರ್ಯಗಳಿಂದ ಪ್ರಭಾವಿತರಾಗಿ ಬಿವಿವಿ ತಂಡವನ್ನು ಶ್ಲಾಘಿಸಿದರು.

ಪಂ. ಪುಟ್ಟರಾಜ ಗವಾಯಿಗಳ ಸಂಗೀತ ತಂಡದ ಪ್ರಾರ್ಥನೆಯೊಂದಿಗೆ ಕಾರ್ಯಕ್ರಮ ಪ್ರಾರಂಭವಾಯಿತು. ಅರ್ಪಿತಾ ದ್ಯಾಂಪುರ ಅತಿಥಿಗಳನ್ನು ಪರಿಚಯಿಸಿದರು. ಶ್ರಾವಣಿ ಅಣ್ಣಿಗೇರಿ ಸ್ವಾಗತಿಸಿದರು. ಭುವನಚಂದ್ರ ನಿರೂಪಿಸಿದರು. ಅನುಷ್ ಹೀರೆಮಠ ವಂದಿಸಿದರು.

ಕಾರ್ಯಕ್ರಮದಲ್ಲಿ ಶಾಲೆಯ ಕಾರ್ಯದರ್ಶಿ ಎಸ್.ರವಿ, ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್ ಬುರುಡಿ, ಇಎಲ್‌ಸಿ ಮುಖ್ಯಸ್ಥೆ ಮಲ್ಲಿಕಾ ಆರ್, ಪ್ಲೇಹೋಮ್ ಮುಖ್ಯಸ್ಥೆ ಗಂಗಾ, ನಿರ್ದೇಶಕ ಆರ್. ವಿನಾಯಕ್, ಪ್ರಾಚಾರ್ಯ ವಿ.ಎಮ್ ಅಡ್ನೂರ್, ಶಿಕ್ಷಕ ವೃಂದದವರು ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.



# ವಚನ ಸಾಹಿತ್ಯ ವಿಶ್ವಮಾನ್ಯವಾಗಿದೆ



■ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜದಲ್ಲಿ ಪರಿವರ್ತನೆ, ವೈಚಾರಿಕತೆ ತರಲು ವಚನ ಸಾಹಿತ್ಯದ ಮೂಲಕ ಜನಜಾಗೃತಿ ಮಾಡಿದ ಬಸವಣ್ಣನವರ ವಚನ ಸಾಹಿತ್ಯ ವಿಶ್ವಮಾನ್ಯತೆ ಪಡೆದುಕೊಂಡಿದೆ ಎಂದು ಗದಗ ಅಡವೀಂದ್ರಸ್ವಾಮಿ ಮಠದ ಧರ್ಮದರ್ಶಿ ಮಹೇಶ್ವರ ಸ್ವಾಮೀಜಿ ಹೊಸಳ್ಳಿಮಠ ಹೇಳಿದರು.

ಅಡವೀಂದ್ರಸ್ವಾಮಿ ಮಠದಲ್ಲಿ ನಡೆದ 316ನೇ ಮಾಸಿಕ ಶಿವಾನುಭವ ಗೋಷ್ಠಿ ಕಾರ್ಯಕ್ರಮದ ಸಮ್ಮುಖ ವಹಿಸಿ ಮಾತನಾಡಿದ ಅವರು, ಬಸವಾದಿ ಶರಣರು ವಚನ ಸಾಹಿತ್ಯದ ಮೂಲಕ ಸಮಾಜವನ್ನು ಸರಿ ದಾರಿಗೆ ತಂದು ಧಾರ್ಮಿಕ ಮತ್ತು ವೈಚಾರಿಕ ತತ್ವದಡಿ ಮುನ್ನಡೆಸಿದವರು ಎಂದರು.

ವಚನ ಸಾಹಿತ್ಯದಲ್ಲಿ ಸಾಮಾಜಿಕ ಪ್ರಜ್ಞೆ ವಿಷಯವಾಗಿ ಉಪನ್ಯಾಸ ನೀಡಿದ ಪ್ರೊ. ಎಸ್.ಯು ಸಜ್ಜನಶೆಟ್ಟರ 12ನೇ ಶತಮಾನದ ಬಸವಾದಿ ಶರಣರು ರಚಿಸಿದ ವಚನಗಳಲ್ಲಿನ ಸಾಮಾಜಿಕ ಪ್ರಜ್ಞೆ ಹಾಗೂ ಮಾನವೀಯ ಮೌಲ್ಯಗಳನ್ನು ನಾವಿಂದು ಅಳವಡಿಸಿಕೊಳ್ಳಬೇಕಿದೆ ಎಂದರು. ಅಧ್ಯಕ್ಷತೆಯನ್ನು ವ್ಹಿ.ಎಂ ಕುಂದ್ರಾಳಹಿರೇಮಠ ವಹಿಸಿದ್ದರು. ಮೋಹನಲಾಲ ಕುಂದನಮಲ್ ಶಹಾ, ಪರಶುರಾಮ ನವಲೆ, ಪ್ರೊ. ವ್ಹಿ.ವ್ಹಿ ಹೊಸಳ್ಳಿಮಠ ಹಾಗೂ ಬಿ.ಎಂ ಬಿಳೆಯಲಿ ಅವರನ್ನು ಸನ್ಮಾನಿಸಲಾಯಿತು.

ಪ್ರಸಾದ ಸೇವೆಯನ್ನು ಹರೀಶ, ಸೋಹನಲಾಲ ಶಹಾ ವಹಿಸಿದ್ದರು. ಗೀತಾ ಹೂಗಾರ ಪ್ರಾರ್ಥಿಸಿದರು, ಯು.ಆರ್ ಭೂಸನೂರಮಠ ಸ್ವಾಗತಿಸಿದರು. ಬಿ.ಬಿ ಪಾಟೀಲ ನಿರೂಪಿಸಿದರು. ಪ್ರಕಾಶ ಬಂಡಿ ವಂದಿಸಿದರು.

# ರಾಜ್ಯದ ಕಾಂಗ್ರೆಸ್ ಅಮಾಯಕರನ್ನು ಬೆದರಿಸುತ್ತಿದೆ

■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಹಿಂದೂ ಸಂಟನೆಯ ಹೋರಟಗಾರ ಪುನೀತ್ ಕೆರೆಹಳ್ಳಿ ಅವರ ಮೇಲೆ ಸುಳ್ಳು ಪ್ರಕರಣ ದಾಖಲಿಸಲಾಗಿದ್ದು, ಕಾಂಗ್ರೆಸ್ ಸರ್ಕಾರ ತಕ್ಷಣ ಅವರ ಮೇಲಿರುವ ಸುಳ್ಳು ಪ್ರಕರಣಗಳನ್ನು ಹಿಂಪಡೆಯಬೇಕು ಎಂದು ಮುಂಡರಗಿ ಮಂಡಲದ ಬಿಜೆಪಿ ಪ್ರಧಾನ ಕಾರ್ಯದರ್ಶಿ ದೇವಪ್ಪ ಇಟಗಿ ಒತ್ತಾಯಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಯಾವ ತಪ್ಪು ಮಾಡದಿದ್ದರೂ ಕಾಂಗ್ರೆಸ್ ನೇತೃತ್ವದ ಸರ್ಕಾರ ಅಮಾಯಕರನ್ನು ಬೆದರಿಸುವ ಕಾರ್ಯ ಮಾಡುತ್ತಿದೆ.

ಈ ಸರ್ಕಾರ ಬಂದ ಮೇಲೆ ಹಿಂದೂ ಕಾರ್ಯಕರ್ತರ ಮೇಲೆ ಹಲ್ಲೆಗಳು, ಉಗ್ರ ಚಟುವಟಿಗಳು ನಡೆಯುತ್ತಿರುವದು ಸರ್ಕಾರದ ವೈಫಲ್ಯತೆಯನ್ನು ತೋರಿಸುತ್ತದೆ.

ಹೀಗೆಯೇ ಮುಂದುವರಿದಲ್ಲಿ, ಕಾಂಗ್ರೆಸ್ ಸರ್ಕಾರದ ದುರಾಡಳಿತದ ಧೋರಣೆಯನ್ನು ಖಂಡಿಸಿ ಉಗ್ರ ಹೋರಾಟ ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಸುಭಾಷ್ ಗುಡಿಮನಿ, ಚಂದ್ರಕಾಂತ ಮಟ್ಟಿ, ಗೋಣಪ್ಪ ಚೌಡಾಳ, ನಾಗರಾಜ ಮುರಡಿ, ಮಾಂತೇಶ ಕಲಾಲ, ಮಾರುತಿ ಮ್ಯಾಗೇರಿ, ನಿಂಗಪ್ಪ ಹರಿಜನ ಮುಂತಾದವರು ಹೇಳಿಕೆಗೆ ಸಮ್ಮತಿಸಿದ್ದಾರೆ.

## ದೊಡ್ಡಮೇಟಿ ಕುಟುಂಬದಿಂದ ಶಾಸಕ ಜಿ.ಎಸ್ ಪಾಟೀಲರಿಗೆ ಕೃತಜ್ಞತಾರ್ಪಣೆ

# ಎಲ್ಲರ ಶ್ರಮಕ್ಕೆ ಜಯ ದೊರೆತಿದೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಮ್ಮ ಅಜ್ಜನವರಾದ ಅಂದಾನಪ್ಪ ದೊಡ್ಡಮೇಟಿಯವರ ಸಮಾಧಿಯನ್ನು ಸ್ಮಾರಕವನ್ನಾಗಿ ನಿರ್ಮಾಣ ಮಾಡಲು ರಾಜ್ಯ ಸರಕಾರ ಒಪ್ಪಿಗೆ ನೀಡಿರುವುದು ನಮಗೆ, ಅಭಿಮಾನಿಗಳಿಗೆ, ಈ ಭಾಗದ ಎಲ್ಲ ಜನತೆಗೆ ಹರ್ಷ ತಂದಿದೆ. ಈ ಕಾರ್ಯ ನೆರವೇರಿಸುವಲ್ಲಿ ಪ್ರಮುಖ ಪಾತ್ರ ವಹಿಸಿರುವ ರೋಣ ಶಾಸಕ ಜಿ.ಎಸ್ ಪಾಟೀಲರಿಗೆ ನಮ್ಮ ಕುಟುಂಬದ ವತಿಯಿಂದ ಹಾಗೂ ಅಂದಾನಪ್ಪ ದೊಡ್ಡಮೇಟಿಯವರ ಅಭಿಮಾನಿ ಬಳಗದಿಂದ ಹೃತ್ಪೂರ್ವಕ ಅಭಿನಂದನೆಗಳು ಎಂದು ಚನ್ನಬಸವ ದೊಡ್ಡಮೇಟಿ ಹೇಳಿದರು.

ಅಂದಾನಪ್ಪ ದೊಡ್ಡಮೇಟಿಯವರ ಸ್ಮಾರಕ ನಿರ್ಮಾಣಕ್ಕೆ ರಾಜ್ಯ ಸರಕಾರ ಮುಂದಾಗಿರುವ ಹಿನ್ನೆಲೆಯಲ್ಲಿ, ಕೃತಜ್ಞತೆ ಅರ್ಪಿಸಲು ಶನಿವಾರ ಅವರ ಮನೆಯಲ್ಲಿ ನಡೆದ ಕೃತಜ್ಞತಾರ್ಪಣಾ ಸಭೆಯಲ್ಲಿ ಅವರು ಮಾತನಾಡಿದರು.

ಕಳೆದ 50 ವರ್ಷಗಳಿಂದ ಈ ಕುರಿತು ಹೋರಾಟ ನಡೆದಿತ್ತು. ಅಧಿಕಾರದಲ್ಲಿದ್ದ ಎಲ್ಲ ಸರಕಾರಗಳಿಗೆ ಮನವಿಗಳನ್ನು ಅರ್ಪಿಸಿ ಸೋತು ಹೋಗಿದ್ದರು. ಮಾಧ್ಯಮದ ಮಿತ್ರರೂ ಈಬಗ್ಗೆ ಗಮನ ಸೆಳೆದಿದ್ದರು. ಕೊನೆಗೂ ಅವರೆಲ್ಲರ ಶ್ರಮಕ್ಕೆ ಜಯ ಸಿಕ್ಕಿದ್ದು ತಮಗೆ ಸಂತಸ ತಂದಿದೆ ಎಂದು ಚನ್ನಬಸವ ದೊಡ್ಡಮೇಟಿ ಹೇಳಿದರು.

ತಾ.ಪಂ ಮಾಜಿ ಸದಸ್ಯ ಸಂದೇಶ ದೊಡ್ಡಮೇಟಿ ಮಾತನಾಡಿ, ಓರ್ವ ಸ್ವಾತಂತ್ರ್ಯ ಯೋಧ ಮತ್ತು ಕರ್ನಾಟಕ ಏಕೀಕರಣದ ಮುಂಚೂಣಿ ನಾಯಕರಾಗಿದ್ದ ಅಂದಾನಪ್ಪ ದೊಡ್ಡಮೇಟಿಯವರ ಸ್ಮಾರಕ ನಿರ್ಮಾಣಕ್ಕೆ ಈಗ ಕಾಲ ಕೂಡಿ ಬಂದಿದ್ದು ಇದಕ್ಕೆಲ್ಲ ಕಾರಣರಾಗಿರುವ ಮಾಧ್ಯಮ ಮಿತ್ರರನ್ನು, ಕರವೇ ಸಂಘಟನೆಯನ್ನು, ಕರ್ನಾಟಕ ಜನಪರ ಅಭಿವೃದ್ಧಿ ವೇದಿಕೆ, ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿಯ ಪದಾಧಿಕಾರಿಗಳನ್ನು, ಮಂಜೂರು ಮಾಡಿಸುವಲ್ಲಿ ಶ್ರಮಿಸಿದ ರೋಣ ಶಾಸಕ ಜಿ.ಎಸ್ ಪಾಟೀಲರನ್ನು, ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ ಪಾಟೀಲರನ್ನು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವ ಶಿವರಾಜ ತಂಗಡಗಿಯವರನ್ನು ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನೂ ಸಹ ಕುಟುಂಬದ ಪರವಾಗಿ ಹೃತ್ಪೂರ್ವಕವಾಗಿ ಅಭಿನಂದಿಸುತ್ತೇವೆ ಎಂದು ಸಂದೇಶ ಹೇಳಿದರು.

ನಿವೃತ್ತ ಶಿಕ್ಷಕ ಎಂ.ಎಸ್ ದಢೇಸೂರಮಠ ಸ್ವಾಗತಿಸಿದರು. ಮೆಹಬೂಬ ನದಾಫ್, ವೀರಪ್ಪ ಕವಮ್ಮಾರ, ದೊಡ್ಡಮೇಟಿ ಕುಟುಂಬದ ವಿಜಯ ದೊಡ್ಡಮೇಟಿ ಸೇರಿದಂತೆ ಎಲ್ಲ ಕುಟುಂಬಸ್ಥರು ಉಪಸ್ಥಿತರಿದ್ದರು.

ಗ್ರಾ.ಪಂ ಮಾಜಿ ಸದಸ್ಯ ಹರ್ಷವರ್ಧನ ದೊಡ್ಡಮೇಟಿ ಮಾತನಾಡಿ, ಮುಖ್ಯಮಂತ್ರಿಗಳು ವಿಧಾನಸೌಧದೆದುರು ತಾಯಿ ಭುವನೇಶ್ವರಿ ಮೂರ್ತಿಯ ಸ್ಥಾಪನೆ ಮಾಡುವುದಾಗಿ ತಿಳಿಸಿದ್ದಾರೆ. ತಾಯಿ ಭುವನೇಶ್ವರಿ ಕಲ್ಪನೆ ಮೊದಲು ಮೂಡಿದ್ದೇ ಅಂದಾನಪ್ಪ ದೊಡ್ಡಮೇಟಿಯವರಿಗೆ. ಅವರ ಕನಸಿಗೆ ಬಣ್ಣ ತುಂಬಿದವರು ಗದುಗಿನ ಕಲಾವಿದ ಸಿ.ಎನ್ ಪಾಟೀಲರು. ಹೀಗಾಗಿ, ಮುಖ್ಯಮಂತ್ರಿಗಳು ದೊಡ್ಡಮೇಟಿ ಕನಸಿನ ಮೂರ್ತಿಯನ್ನು ಸ್ಥಾಪಿಸಬೇಕು ಮತ್ತು ಅದನ್ನೇ ರಾಜ್ಯದ ಅಧಿಕೃತ ಭುವನೇಶ್ವರಿ ಮಾತೆ ಎಂದು ಅಂಗೀಕರಿಸಬೇಕೆಂದು ಆಗ್ರಹಿಸಿದರು.


## ನೀವೂ ನಮ್ಮ ಜೊತೆ ಕೈಜೋಡಿಸಿ

'ವಿಜಯಸಾಕ್ಷಿ'

ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.

ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..

ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.

E-mail: vijayasakshidaily@gmail.com

ಮೊ : 9019256545

# ಹಗರಣದ ತನಿಖೆಗಾಗಿ ನರಗುಂದಕ್ಕೆ ತನಿಖಾ ತಂಡ

▶▶ ಮೊದಲನೇ ಪುಟದಿಂದ

ಕುರಿತು ತನಿಖೆ ನಡೆಸಲಿದೆ. ಒಂದು ತಿಂಗಳಲ್ಲಿ ಸದರಿ ಸಮಿತಿ ಸರಕಾರಕ್ಕೆ ವರದಿ ಸಲ್ಲಿಸಲಿದ್ದು, ವರದಿ ಆಧರಿಸಿ ಸರಕಾರ ಮುಂದಿನ ಕ್ರಮ ಕೈಗೊಳ್ಳಲಿದೆ.

ಅಭಿವೃದ್ಧಿ ಕಾಮಗಾರಿಗಳ ಗುಣಮಟ್ಟ, ನಿಯಮಗಳ ಪಾಲನೆ, ಕೈಗೊಂಡ ಕಾಮಗಾರಿಯ ಅಗತ್ಯತೆ, ಅಧಿಕಾರ ದುರುಪಯೋಗ ನಡೆದಿರುವ ಸತ್ಯಾಸತ್ಯತೆಗಳ ಕುರಿತು ತನಿಖೆ ನಡೆಯಲಿದೆ ಎಂದರು.

ಈ ಎಲ್ಲ ಕಾಮಗಾರಿಗಳು ಅಂದಿನ ಲೋಕೋಪಯೋಗಿ ಇಲಾಖೆ ಸಚಿವರು, ನರಗುಂದ ಶಾಸಕ ಸಿ.ಸಿ ಪಾಟೀಲ ನೇತೃತ್ವದಲ್ಲೇ ನಡೆದಿವೆ ಎಂದು ಆರೋಪಿಸಿದ ಬಿ.ಆರ್ ಯಾವಗಲ್, ಕಾನೂನು ಮೀರಿ ಕಾಮಗಾರಿ ನಡೆದಿದ್ದರೆ ಅದಕ್ಕೆ ಹಾಲಿ ಶಾಸಕ ಸಿ.ಸಿ ಪಾಟೀಲರೇ ಹೊಣೆಯಾಗುತ್ತಾರೆ.

ಸರಕಾರದ ಹಣವನ್ನು ಸ್ವಾರ್ಥ ಸಾಧನೆಗೆ ಬಳಸಿಕೊಳ್ಳುವುದು ಕೆಟ್ಟ ಕೆಲಸ ಎಂದು ಆರೋಪಿಸಿದರು.

ನರಗುಂದ ಬೈಪಾಸ್ ನಿರ್ಮಾಣದಲ್ಲೂ ಮಾಜಿ ಸಚಿವರು ಅಕ್ರಮ ನಡೆಸಿದ್ದಾರೆ. ಬೈಪಾಸ್ ನಿರ್ಮಾಣಕ್ಕೆ 2014ರಲ್ಲಿ 80 ಕೋಟಿ ರೂ. ಅಂದಾಜು ಮಾಡಲಾಗಿತ್ತು. ಆದರೆ ಸಿ.ಸಿ ಪಾಟೀಲ ಅವರು 130 ಕೋಟಿಗೆ ಏರಿಸಿದ್ದಾರೆ.

5.7 ಕಿ.ಮೀ ರಸ್ತೆಯನ್ನು 7.3 ಕಿ.ಮೀ.ಗೆ ಹೆಚ್ಚಿಸಿದ್ದಾರೆ. 93 ಎಕರೆ ಭೂಸ್ವಾಧೀನವನ್ನು 81 ಎಕರೆಗೆ ಇಳಿಸಿದ್ದಾರೆ ಎಂದು ಆರೋಪಿಸಿದರಲ್ಲದೆ, ಇಂಥ ಹಲವಾರು ಅಕ್ರಮಗಳ ಬಗ್ಗೆ ತನಿಖೆ ನಡೆದು, ಸತ್ಯಾಸತ್ಯತೆ ಹೊರಬರಲಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಕಾಂಗ್ರೆಸ್ ಮುಖಂಡರಾದ ಮಿಲಿಂದ ಕಾಳೆ, ಎಂ.ಬಿ ಅರಹುಣಸಿ, ಜಿ.ಐ ಕುರಹಟ್ಟಿ, ಪ್ರವೀಣ ಯಾವಗಲ್, ರಾಜು ಕಲಾಲ್, ಗುರುಪಾದಪ್ಪ ಉಪಸ್ಥಿತರಿದ್ದರು.

**ಬಿಸಿಎನ್ ಪಾಲಿಟೆಕ್ನಿಕಲ್ ಕಾಲೇಜಿನಲ್ಲಿ ಹಮ್ಮಿಕೊಂಡ ಕಾರ್ಯಾಗಾರದಲ್ಲಿ ಶಾಸಕ ಡಾ. ಚಂದ್ರು ಲಮಾಣಿ**

# ಶಿಕ್ಷಣ ಕ್ಷೇತ್ರ ಸರ್ವಕ್ಷೇತ್ರದ ಪ್ರಗತಿಯ ಮೂಲ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪ್ರೌಢಶಾಲಾ ಹಂತದ ಶಿಕ್ಷಣ ವಿದ್ಯಾರ್ಥಿಯ ಜೀವನದ ಬುನಾದಿ. ಈ ಹಂತದಲ್ಲಿ ವಿದ್ಯಾರ್ಥಿಗಳಲ್ಲಿ ಶಿಕ್ಷಣದ ಮಹತ್ವ ತಿಳಿಸಿ, ಭವಿಷ್ಯದ ಶ್ರೇಷ್ಠ ನಾಗರಿಕರನ್ನಾಗಿ ರೂಪಿಸುವ ಗುರುತರ ಜವಾಬ್ದಾರಿ ಪ್ರೌಢಶಾಲಾ ಮುಖ್ಯೋಪಾಧ್ಯಾಯರು ಹಾಗೂ ಶಿಕ್ಷಣಾಧಿಕಾರಿಗಳ ಮೇಲಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಅಭಿಪ್ರಾಯಪಟ್ಟರು.



ಅವರು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಶಿರಹಟ್ಟಿ, ಶಿಕ್ಷಣಾಧಿಕಾರಿಗಳ ಸಂಘ ಗದಗ ಹಾಗೂ ಶಿರಹಟ್ಟಿ ಸಹಯೋಗದಲ್ಲಿ ಗದಗ ಜಿಲ್ಲೆಯ ಶಿಕ್ಷಣಾಧಿಕಾರಿಗಳು, ಸಮಾನ ಸ್ಥರದ ಅಧಿಕಾರಿಗಳು, ಶಿಕ್ಷಣಾಧಿಕಾರಿಗಳು, ಸರ್ಕಾರಿ ಪ್ರೌಢಶಾಲಾ ಮುಖ್ಯೋಪಾಧ್ಯಾಯರಿಗಾಗಿ ಲಕ್ಷ್ಮೇಶ್ವರದ ಬಿಸಿಎನ್ ಪಾಲಿಟೆಕ್ನಿಕಲ್ ಕಾಲೇಜಿನಲ್ಲಿ ಹಮ್ಮಿಕೊಂಡ 'ಸರಕಾರಿ ಪ್ರೌಢಶಾಲೆಗಳ ಅಭಿವೃದ್ಧಿ, ಗುಣಾತ್ಮಕ ಶಿಕ್ಷಣಕ್ಕಾಗಿ ಕೈಗೊಳ್ಳಬೇಕಾದ ಕ್ರಮಗಳು ಹಾಗೂ ಎಸ್‌ಎಸ್‌ಎಲ್‌ಸಿ ಫಲಿತಾಂಶ ಉತ್ತಮೀಕರಣ' ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಶಿಕ್ಷಣ ಕ್ಷೇತ್ರ ಸರ್ವಕ್ಷೇತ್ರದ ಪ್ರಗತಿಯ ಮೂಲವಾಗಿದೆ. ಈ ಕ್ಷೇತ್ರದ ಅಮೂಲಾಗ್ರ ಬದಲಾವಣೆ, ಸುಧಾರಣೆ, ಪ್ರಗತಿಯಲ್ಲಿ ಶಿಕ್ಷಣಾಧಿಕಾರಿಗಳ ಪಾತ್ರ ಮಹತ್ವದ್ದಾಗಿದೆ. ಮಕ್ಕಳಿಗೆ ಶಾಲಾ ಹಂತದಲ್ಲಿಯೇ ಬದುಕಿಗೆ ಪೂರಕವಾದ ಗಾಂಧೀಜಿ ಅವರ ಮೂಲ ಶಿಕ್ಷಣದ ಪರಿಕಲ್ಪನೆ ಅಡಕವಾಗಿರಬೇಕು ಎಂದರು.

ಸಭೆಯ ನೇತೃತ್ವ ವಹಿಸಿದ್ದ ಶಿಕ್ಷಣಾಧಿಕಾರಿಗಳ ಸಂಘದ ರಾಜ್ಯ ಉಪಾಧ್ಯಕ್ಷ ಜಿ.ಎಂ ಮುಂದಿನಮನಿ ಮಾತನಾಡಿ, ಸರಕಾರಿ ಪ್ರೌಢಶಾಲಾ ಮುಖ್ಯೋಪಾಧ್ಯಾಯರಿಂದ ಹಿಡಿದು ಶಿಕ್ಷಣ ಇಲಾಖೆಯ ರಾಜ್ಯ ನಿರ್ದೇಶಕರವರೆಗೆ ಇರುವ ಎಲ್ಲ ಶಿಕ್ಷಣಾಧಿಕಾರಿಗಳು ಶಿಕ್ಷಣ ಇಲಾಖೆಯ ಮೆದುಳು ಇದ್ದ ಹಾಗೆ. ಇಲಾಖೆಯ ಎಲ್ಲ ಕಾರ್ಯಚಟುವಟಿಕೆಗಳನ್ನು ಅತ್ಯಂತ ಕಾಳಜಿಪೂರ್ವಕವಾಗಿ ಅನುಷ್ಠಾನಗೊಳಿಸುವ ಕಾರ್ಯವನ್ನು ಅಧಿಕಾರಿಗಳು ಮಾಡುತ್ತಿದ್ದಾರೆ. ಅವರಿಗೆ ನೈತಿಕವಾದ ಬಲ ಬೆಂಬಲವನ್ನು ಶಿಕ್ಷಣಾಧಿಕಾರಿಗಳ ಸಂಘ ನೀಡುತ್ತಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಶಿಕ್ಷಣಾಧಿಕಾರಿಗಳ ಸಂಘದ ಜಿಲ್ಲಾ ಕಾರ್ಯದರ್ಶಿ ಆರ್.ಎಸ್ ಬುರಡಿ, ಇಲಾಖೆಯ ಅಧಿಕಾರಿಗಳ ಸಲಹೆ-ಸೂಚನೆಯಂತೆ ಮುಖ್ಯ ಶಿಕ್ಷಕರು, ಶಿಕ್ಷಕರು ಕಾರ್ಯನಿರ್ವಹಿಸುತ್ತಿರುವುದರಿಂದ ಗುಣಾತ್ಮಕ, ಪರಿಣಾಮಾತ್ಮಕ ಬದಲಾವಣೆ ಸಾಧ್ಯವಾಗುತ್ತಿದೆ ಎಂದರು.

ಶಿಕ್ಷಣಾಧಿಕಾರಿಗಳ ಸಂಘದ ರಾಜ್ಯ ಸಂ.ಕಾರ್ಯದರ್ಶಿ ರುದ್ರಪ್ಪ ಹುರುಳಿ ಮಾತನಾಡಿ, ರಾಜದಾದ್ಯಂತ ಎಲ್ಲ ವಿಧದ ಒತ್ತಡಗಳನ್ನು ಸಮರ್ಥವಾಗಿ ನಿಭಾಯಿಸಿ, ಇಲಾಖೆಯ ಜವಾಬ್ದಾರಿಯನ್ನು ಸಮರ್ಥವಾಗಿ ನಿರ್ವಹಿಸುತ್ತಿರುವ ನಮ್ಮ ಶಿಕ್ಷಣಾಧಿಕಾರಿಗಳಿಗೆ ಶಿಕ್ಷಣಾಧಿಕಾರಿಗಳ ಸಂಘ ನಿರಂತರವಾಗಿ ಬೆಂಬಲವಾಗಿ ನಿಂತಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ(ಅಭಿವೃದ್ಧಿ), ಶಿಕ್ಷಣಾಧಿಕಾರಿಗಳ ಸಂಘದ ಜಿಲ್ಲಾಧ್ಯಕ್ಷ ಜಿ.ಎಲ್ ಬಾರಾಟಕ್ಕೆ ಮಾತನಾಡಿ, ದಸರಾ ರಜಾ ದಿನಗಳಲ್ಲಿಯೂ ಕೂಡ ನಮ್ಮ ಪ್ರೌಢಶಾಲಾ ಮುಖ್ಯೋಪಾಧ್ಯಾಯರು, ಶಿಕ್ಷಣಾಧಿಕಾರಿಗಳು, ಶಿಕ್ಷಕರು ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗಳಿಗೆ ವಿಶೇಷ ತರಗತಿ, ಮೇಲ್ವಿಚಾರಣೆ ಮಾಡಿ ಫಲಿತಾಂಶ ಸುಧಾರಣೆಗೆ ಮುಂದಾಗಿರುವುದು ಶ್ಲಾಘನೀಯ ಎಂದರು.

ಜಿಲ್ಲಾ ಅಕ್ಷರ ದಾಸೋಹದ ಶಿಕ್ಷಣಾಧಿಕಾರಿ ಎಸ್.ಡಿ ಕನವಳ್ಳಿ, ಗದಗ ಗ್ರಾಮೀಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ ನಡುವಿನಮನಿ, ಡಯಟ್ ಉಪನ್ಯಾಸಕ ಎಚ್.ಬಿ ರಡ್ಡೇರ, ಶಂಕರ ಹಡಗಲಿ, ಎಸ್.ಕೆ ಹವಾಲ್ದಾರ ಮಾತನಾಡಿದರು.

ಮುಂಡರಗಿ ಪ್ರಭಾರ ಬಿಇಓ ಗಂಗಾಧರ ಅಣ್ಣಿಗೇರಿ, ನರಗುಂದ ಪ್ರಭಾರ ಬಿಇಓ ಬಸವರಾಜ ಮಜ್ಜಿಗಿ, ಶಿಕ್ಷಣಾಧಿಕಾರಿ ಮಂಗಳಾ ತಾಪಸ್ಕರ, ಲಕ್ಷ್ಮೇಶ್ವರ ತಾಲೂಕಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಎಸ್ ಹರ್ಲಾಪುರ, ಸಮನ್ವಯಾಧಿಕಾರಿಗಳು, ಸರಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರು, ಸಿಆರ್‌ಪಿ, ಬಿಆರ್‌ಪಿ, ಇಸಿಓ ಪಾಲ್ಗೊಂಡಿದ್ದರು. ಶಿರಹಟ್ಟಿ ತಾಲೂಕಾ ಶಿಕ್ಷಣಾಧಿಕಾರಿಗಳ ಸಂಘದ ಅಧ್ಯಕ್ಷ ಎಂ.ಬಿ ಹೊಸಮನಿ, ಡಯಟ್ ಉಪನ್ಯಾಸಕ ಎಸ್.ಎಸ್ ಕುರಿ, ಬಿಆರ್‌ಪಿ ಈಶ್ವರ ಮೆಡ್ಲೇರಿ, ಸಿಆರ್‌ಪಿ ಜೆ.ಎಸ್ ಗಾಯಕವಾಡ, ಕೆ.ಪಿ ಕಂಬಳಿ ನಿರೂಪಿಸಿದರು.

# ವ್ಯಸನಮುಕ್ತ ಕನಸು ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯಿಂದ ನನಸು

▶▶ ಮೊದಲನೇ ಪುಟದಿಂದ

ಹಾದಿಯಲ್ಲಿ ಸಾಗುತ್ತಿದೆ. ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ನೂರಾರು ಮದ್ಯವರ್ಜನ ಕೇಂದ್ರದ ಮೂಲಕ ಲಕ್ಷಾಂತರ ವ್ಯಸನಿಗಳಿಗೆ ಮನೋವಿಕಾಸ ತರಬೇತಿ ನೀಡಿ ಅವರನ್ನು ವ್ಯಸನಮುಕ್ತರಾಗಿ ಮಾಡಿ ನವ ಜೀವನ ನೀಡಿರುವುದು ಶ್ಲಾಘನೀಯವಾಗಿದೆ ಎಂದರು.

ರಾಜ್ಯ ಸರಕಾರ ಮಹಿಳೆಯರಿಗಾಗಿ ಹತ್ತು ಹಲವು ಯೋಜನೆ ಜಾರಿಗೆ ತರಲಾಗಿದೆ. ಒಂದು ಕುಟುಂಬಕ್ಕೆ ಒಂದು ವರ್ಷಕ್ಕೆ 60 ಸಾವಿರ ಹಣ ನೀಡಲಾಗುತ್ತದೆ. ಹೀಗಾಗಿ ಇಡೀ ಕುಟುಂಬದ ಚಿತ್ರಣವನ್ನು ಬದಲಾವಣೆ ಮಾಡಲಾಗಿದೆ. ಸ್ವಾಭಿಮಾನಿ ಸಮಾಜ ನಿರ್ಮಾಣ ಆಗುತ್ತದೆ. ಬಡತನ ನಿರ್ಮೂಲನೆಗೆ ಕ್ರಾಂತಿಕಾರಕ ಬದಲಾವಣೆ ಆಗಿದೆ. ಮಹಿಳೆಯರು ಸಾಂಸ್ಕೃತಿಕ, ಆರ್ಥಿಕವಾಗಿ ಸಂಘಟನೆಯಾಗಿದ್ದಾರೆ. ಮಹಿಳೆಯರು ಆರ್ಥಿಕವಾಗಿ ಶಕ್ತಿಯಾಲಿ ಆಗಿದ್ದಾರೆ. ಆರ್ಥಿಕ ಶಿಸ್ತು ಪಡೆದುಕೊಂಡಿದ್ದಾರೆ. ಆಡಳಿತದ ವ್ಯವಹಾರ ಪಡೆದುಕೊಂಡಿದ್ದಾರೆ ಎಂದರು.

ಶ್ರೀ ಧರ್ಮಸ್ಥಳದ ವೀರೇಂದ್ರ ಹೆಗ್ಗಡೆ ಅವರ ಮಾರ್ಗದರ್ಶನದಲ್ಲಿ ಮಹಿಳೆಯರು ಆರ್ಥಿಕವಾಗಿ ಬಲಿಷ್ಠರಾಗುತ್ತಿದ್ದಾರೆ. ಮಹಿಳೆಯರು ಸ್ವಯಂ ಉದ್ಯೋಗ ಮಾಡುವ ಕೆಲಸವನ್ನು ಮಾಡಬೇಕು. ಉತ್ತರ ಕರ್ನಾಟಕದ ಹಲವಾರು ತಿಂಡಿ ತಿನಿಸುಗಳಿಗೆ ಹೆಚ್ಚಿನ ಬೇಡಿಕೆ ಇದೆ. ಸ್ತ್ರೀ ಶಕ್ತಿ ಗುಂಪುಗಳು ಉದ್ಯೋಗ ಸೃಷ್ಟಿ ಮಾಡುವ ಕೆಲಸವನ್ನು ಮಾಡಬೇಕು. ಇದರಿಂದ ನಿರುದ್ಯೋಗ ಪ್ರಮಾಣ ಕಡಿಮೆ ಆಗುತ್ತದೆ ಎಂದರು.

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕ ಯೋಗೀಶ್ ಎ. ಮಾತನಾಡಿ, ಶ್ರೀಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಡಾ. ಡಿ.ವೀರೇಂದ್ರ ಹೆಗ್ಗಡೆಯವರು 1992 ರಲ್ಲಿ ದುಶ್ಚಟಮುಕ್ತ ಸಮಾಜ ನಿರ್ಮಾಣಕ್ಕಾಗಿ ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆಯನ್ನು ಬೆಳ್ತಂಗಡಿಯಲ್ಲಿ ಪ್ರಾರಂಭ ಮಾಡಿದ್ದಾರೆ. ಜಿಲ್ಲೆಯಲ್ಲಿ ಜನಜಾಗೃತಿ ವೇದಿಕೆಯನ್ನು 2009 ರಲ್ಲಿ ಪ್ರಾರಂಭ ಮಾಡಿ ಇದುವರೆಗೂ 39 ಮದ್ಯವರ್ಜನ ಶಿಬಿರಗಳನ್ನು ಏರ್ಪಡಿಸಿ 2847 ಮದ್ಯವ್ಯಸನಿಗಳನ್ನು ಮದ್ಯಮುಕ್ತರನ್ನಾಗಿ ಮಾಡಿಸಲಾಗಿದೆ ಎಂದರು.

ಇದಕ್ಕೂ ಮೊದಲು ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿಸಿ ಟ್ರಸ್ಟ್ ವತಿಯಿಂದ ನಗರದ ತೋಂಟದಾರ್ಯ ಮಠದಿಂದ ದುಶ್ಚಟಗಳ ವಿರುದ್ಧ ಜಾಗೃತಿ ಜಾಥಾಕ್ಕೆ ಚಾಲನೆ ನೀಡಲಾಯಿತು. ಅಲ್ಲಿಂದ ಆರಂಭವಾದ ಜಾಥಾವು ನಗರದ ಪ್ರಮುಖ ಭಾಗಗದಲ್ಲಿ ಸಂಚರಿಸಿ ನಗರದ ಕೆ.ಎಚ್.ಪಾಟೀಲ ಸಭಾಭವನಕ್ಕೆ ಮುಕ್ತಯಗೊಂಡಿತು. ಬೃಹತ್ ಜಾಗೃತಿ ಜಾಥಾದಲ್ಲಿ ಮಹಿಳೆಯರಿಂದ ಪೂರ್ಣ ಕುಂಭಮೇಳ ನಡೆಯಿತು.

ಸಾನ್ನಿಧ್ಯ ಜ.ಡಾ.ತೋಂಟದ ಸಿದ್ಧರಾಮ ಸ್ವಾಮೀಜಿ ವಹಿಸಿದ್ದರು. ಜಿಲ್ಲಾ ಜನಜಾಗೃತಿ ವೇದಿಕೆಯ ಅಧ್ಯಕ್ಷ ಎಚ್.ಬಿ.ಅಸೂಟಿ ಅಧ್ಯಕ್ಷತೆ ವಹಿಸಿದ್ದರು.

ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆಯ ರಾಜ್ಯಾಧ್ಯಕ್ಷ ರಾಜಣ್ಣ ಕೊರವಿ, ಕೊಪ್ಪಳದ ಪ್ರಾದೇಶಿಕ ನಿರ್ದೇಶಕ ಗಣೇಶ.ಬಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಜನಜಾಗೃತಿ ವೇದಿಕೆಯ ನಿಕಟಪೂರ್ವ ಅಧ್ಯಕ್ಷ ಶಿವಪ್ರಕಾಶ ಮಹಾಜನಶೆಟ್ಟರ್, ನೂತನ ಅಧ್ಯಕ್ಷ ಶಿವಾನಂದ ಬೆಂತೂರು, ಉಪಾಧ್ಯಕ್ಷ ಚಂದ್ರಶೇಖರ ಹುಣಸಿಕಟ್ಟಿ, ಮಂಜುನಾಥ ಹದ್ದಣ್ಣವರ, ದೇವೇಂದ್ರಪ್ಪ ಕಾಗೆನವರ, ಕ್ಷೇತ್ರ ಯೋಜನಾಧಿಕಾರಿ ಸುರೇಂದ್ರ ನಾಯ್ಕ ಇದ್ದರು.

**ಪತ್ರಿಕಾಗೋಷ್ಠಿಯಲ್ಲಿ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ್ ಮಾನ್ವಿ ಆಗ್ರಹ**

# ಮೂಲ ಫಲಾನುಭವಿಗಳಿಗೆ ಮನೆ ಹಂಚಿಕೆ ಮಾಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ವಸತಿ ರಹಿತ ಸ್ಲಂ ನಿವಾಸಿಗಳಿಗೆ ಮನೆ ಹಂಚಿಕೆ ಮಾಡದಿದ್ದಲ್ಲಿ ಅ.16ರಂದು ಜಿಲ್ಲಾಡಳಿತ ಕಚೇರಿಯ ಮುಂಭಾಗದಲ್ಲಿ ಧರಣಿ ಹಮ್ಮಿಕೊಳ್ಳಲಾಗುತ್ತದೆ ಎಂದು ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ್ ಮಾನ್ವಿ ಹೇಳಿದರು.




ನಗರದ ಪತ್ರಿಕಾ ಭವನದಲ್ಲಿ ಸೋಮವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಜಿಲ್ಲಾ ಸ್ಲಂ ಸಮಿತಿಯಿಂದ ಕಳೆದ 15 ವರ್ಷಗಳಿಂದ ಸ್ಲಂ ಜನರ ವಸತಿ, ಹಕ್ಕುಪತ್ರ ಕಲ್ಪಿಸಲು ಒತ್ತಾಯಿಸಿ ನಿರಂತರ ಹೋರಾಟಗಳನ್ನು ನಡೆಸುತ್ತ, ಜನಪ್ರತಿನಿಧಿಗಳಿಗೆ ಮತ್ತು ಅಧಿಕಾರಿಗಳಿಗೆ ಮನವಿ ನೀಡಿದರೂ ಕೂಡ ಸ್ಲಂ ಜನರ ಮತ್ತು ವಸತಿರಹಿತರ ಬೇಡಿಕೆಗಳಿಗೆ ಸ್ಪಂದಿಸದಿರುವುದು ಖಂಡನೀಯ. ಆದ್ದರಿಂದ ಜಿಲ್ಲಾ ಸ್ಲಂ ಸಮಿತಿಯಿಂದ ಸ್ಲಂ ಜನರ ಮತ್ತು ವಸತಿರಹಿತರ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಬೃಹತ್ ಪ್ರತಿಭಟನೆ ನಡೆಸಲು ಉದ್ದೇಶಿಸಲಾಗಿದೆ ಎಂದರು.

ಚುನಾವಣೆಗೂ ಪೂರ್ವದಲ್ಲಿ ಸ್ಲಂನ 348 ನಿವಾಸಿಗಳಿಗೆ ಮನೆ ಮಂಜೂರು ಮಾಡುವ ಕುರಿತು ಭರವಸೆ ನೀಡಲಾಗಿತ್ತು. ಆದರೆ, ಇದುವರೆಗೂ ಮೂಲ ಫಲಾನುಭವಿಗಳಿಗೆ ಮನೆ ಮಂಜೂರು ಮಾಡಿಲ್ಲ. ಸಚಿವರು ಕೊಳಚೆ ನಿವಾಸಿಗಳಿಗೆ ಮನೆ ಮಂಜೂರು ಮಾಡುವಲ್ಲಿ ನಿರಾಸಕ್ತಿ ತೋರಿಸುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ನಗರದಲ್ಲಿರುವ ವಿವಿಧ ಮನೆ ಹಂಚಿಕೆಯಲ್ಲಿ ತಾರತಮ್ಯವೆಸಗಲಾಗಿದೆ. ಕೂಡಲೇ ಮೂಲ ಫಲಾನುಭವಿಗಳಿಗೆ ಮನೆ ಹಂಚಿಕೆ ಮಾಡಬೇಕು. ಈಗಾಗಲೇ ಸ್ಲಂ ನಿವಾಸಿಗಳ ಸರ್ವೆ ಕಾರ್ಯ ನಡೆಸಲಾಗಿದೆ. ಆದ್ದರಿಂದ ಕೂಡಲೇ ನಗರದಲ್ಲಿರುವ ಸ್ಲಂ ನಿವಾಸಿಗಳಿಗೆ ಹಕ್ಕುಪತ್ರ ನೀಡಬೇಕು, 348 ಸ್ಲಂ ನಿವಾಸಿಗಳ ಬೇಡಿಕೆ ಈಡೇರಿಸಬೇಕು ಎಂದು ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಅಶೋಕ ಕುಸಬಿ, ಮಹಿಳಾ ಸಂಚಾಲಕಿ ಪರವೀಬಾನು ಹವಾಲ್ದಾರ, ಭತತ್ ನವಲಗುಂದ, ವಂದನಾ ಶ್ಯಾವಿ, ರಾಜಸಾಬ್ ಮುಂತಾದವರಿದ್ದರು.

# ಇಂದು 'ನಮೋ ಬ್ರಿಗೇಡ್' ಬೈಕ್ ರ್‍ಯಾಲಿ

▶▶ ಮೊದಲನೇ ಪುಟದಿಂದ

ತಲುಪಲಿದೆ. ಸೆ.28ರಿಂದ ಕೋಲಾರದಲ್ಲಿ ನಮೋ ಬ್ರಿಗೇಡ್ ಬೈಕ್ ರ್‍ಯಾಲಿ ಆರಂಭಗೊಂಡಿದೆ ಎಂದು ಶರಣು ಅಂಗಡಿ ತಿಳಿಸಿದರು. ವಿಜಯಕುಮಾರ್ ನಂದಿಕೋಲಮಠ, ಸಂಜಯ್ ರೆಡ್ಡಿ, ಕಿಶನ್ ಮೆರವಾಡೆ, ಮುತ್ತಣ್ಣ ನವಲಗುಂದ ಮುಂತಾದವರು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

# ಈರುಳ್ಳಿಗೆ ಬೆಂಬಲ ಬೆಲೆ ಘೋಷಿಸಿ

▶▶ ಮೊದಲನೇ ಪುಟದಿಂದ

ಮಾಡಬೇಕು. ಈ ವಿಷಯವನ್ನು ಜಿಲ್ಲಾಧಿಕಾರಿಗಳ ಗಮನಕ್ಕೂ ತರಲಾಗಿದ್ದು, ರೋಗಬಾಧೆಯಿಂದ ಬೆಳೆ ಹಾನಿಗೊಳಗಾದ ಪ್ರದೇಶಕ್ಕೆ ತೋಟಗಾರಿಕೆ ಇಲಾಖೆಯ ಅಧಿಕಾರಿಗಳು ತೆರಳಿ ತರಬೇತಿ ಕಾರ್ಯಕ್ರಮ ನಡೆಸಬೇಕು ಎಂದರು.

ಈ ಸಂದರ್ಭದಲ್ಲಿ ವೀರಣ್ಣ ಕಾಳಗಿ, ವೇದಮೂರ್ತಿ ಬಿ.ಎಂ, ಲೋಕಣ್ಣ ಉಳ್ಳಾಗಡ್ಡಿ, ಈರಣ್ಣ ಹರ್ತಿ, ಉಮೇಶ ಎಚ್., ಕೊಟ್ರೇಶ್ ಶಿವಶಿಂಪಿಗಿ, ಶರಣಪ್ಪ ಮ್ಯಾಗೇರಿ ಇದ್ದರು.

## ನಿಧನ ವಾರ್ತೆ

### ವೀರಪ್ಪ ಬುಡ್ಡಪ್ಪ ಗರ್ಜಪ್ಪನವರ



**ಲಕ್ಕುಂಡಿ:** ಇಲ್ಲಿಯ ಕುರುಬರ ಓಣಿಯ ನಿವಾಸಿ ವೀರಪ್ಪ ಬುಡ್ಡಪ್ಪ ಗರ್ಜಪ್ಪನವರ (94) ಶನಿವಾರ ನಿಧನರಾದರು.

ಮೃತರು ಪತ್ನಿ, ಐವರು ಪುತ್ರರು, ಮೂವರು ಪುತ್ರಿಯರು ಸೇರಿದಂತೆ ಅಪಾರ ಬಂಧು-ಬಳಗ ಅಗಲಿದ್ದಾರೆ.

# ಖೋ ಖೋ ಪಂದ್ಯದಲ್ಲಿ ರಾಜ್ಯ ಮಟ್ಟಕ್ಕೆ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಸಮೀಪದ ಗೋಗೇರಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿಯರು ಖೋ ಖೋ ಪಂದ್ಯಾಟದಲ್ಲಿ ಬೆಳಗಾವಿ ವಿಭಾಗ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆಯುವ ಮೂಲಕ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಬೆಳಗಾವಿ ವಿಭಾಗ ಮಟ್ಟದಲ್ಲಿ ವಿಜಯ ಗಳಿಸಿ ಗ್ರಾಮಕ್ಕೆ ಆಗಮಿಸಿದ ವಿದ್ಯಾರ್ಥಿಗಳನ್ನು ಗ್ರಾಮಸ್ಥರು ಆರತಿ ಬೆಳಗಿ ಸ್ವಾಗತ ಕೋರಿದರು. ಶನಿವಾರ ಶಾಲಾ ಆವರಣದಲ್ಲಿ ವಿದ್ಯಾರ್ಥಿನಿಯರಿಗೆ ಅಭಿನಂದನಾ ಸಮಾರಂಭ ನಡೆಯಿತು.

ಶಾಲೆಯ ಮುಖ್ಯಶಿಕ್ಷಕ ಕೆ.ಎಸ್ ರಾಜೂರ ಮಾತನಾಡಿ, ನಮ್ಮ ಶಾಲೆಯ ವಿದ್ಯಾರ್ಥಿಗಳು ಕ್ರೀಡೆಗಳಲ್ಲಿ ಪ್ರತಿ ವರ್ಷ ರಾಜ್ಯ ಮಟ್ಟದಲ್ಲಿ ಸಾಧನೆ ಮಾಡುವ ಮೂಲಕ ಶಾಲೆ ಹಾಗೂ ಗ್ರಾಮದ ಕೀರ್ತಿ ಹೆಚ್ಚಿಸುತ್ತಿದ್ದಾರೆ. ವಿದ್ಯಾರ್ಥಿನಿಯರಿಗೆ ತರಬೇತಿ ನೀಡಿದ ತರಬೇತುದಾರರು ಹಾಗೂ ಗ್ರಾಮಸ್ಥರ ಬೆಂಬಲದಿಂದ ಈ ಸಾಧನೆ ಸಾಧ್ಯವಾಗಿದೆ. ವಿದ್ಯಾರ್ಥಿನಿಯರು ರಾಜ್ಯ ಮಟ್ಟದಲ್ಲಿಯೂ ಗೆದ್ದು ಬರಲಿ ಎಂದರು.

ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ಪರಶುರಾಮ ಚವಡಿ, ಉಪಾಧ್ಯಕ್ಷೆ ಶಂಕ್ರಮ್ಮ ಗುಂಡೆ, ಸದಸ್ಯರಾದ ಬಸವರಾಜ ಮಾದರ, ಸಿದ್ದಪ್ಪ ಗಾರಗಿ, ಶಂಕ್ರಪ್ಪ ರೊಟ್ಟಿ, ಶರಣಪ್ಪ ಕೊಡಕೇರಿ, ಅಮಿನಸಾಬ ನದಾಫ್, ಹನುಮಂತಪ್ಪ ಗುಜ್ಜಲ, ಯಲ್ಲವ್ವ ಭೋಸಲೆ, ಗ್ರಾಮಸ್ಥರಾದ ಬಸವರಾಜ ಮೂಲಿಮನಿ, ಗಂಗಪ್ಪ ಗುಂಡೆ, ಮಲ್ಲಿಕಾರ್ಜುನ ಗಾರಗಿ, ಕೆ.ಎಸ್ ಕೊಡತಗೇರಿ, ಐ.ಹೆಚ್ ಬಾಗವಾನ, ರವಿಚಂದ್ರ ಗಾರಗಿ, ಶಿವಾಜಿ ಹೊರಪೇಟಿ, ತರಬೇತುದಾರ ರಾಜು ಚೋಪಡೆ, ಶಿಕ್ಷಕರಾದ ಬಿ.ಎಸ್ ಬಳಿಗೇರ, ಎಂ.ಎಚ್ ಮಠದ, ಡಿ.ಎಸ್ ಕುಸುಗಲ್ಲ, ಎಂ.ಬಿ ಬಿರಾದಾರ, ಎಂ.ಬಿ ಹಿರೇಮಠ ಸೇರಿದಂತೆ ಗ್ರಾಮಸ್ಥರು ಇದ್ದರು.

# ಜೂರಿಚ್‌ನ ವಿವಿಧ ಕ್ಷೇತ್ರಗಳಿಗೆ ಬಸವರಾಜ್ ಹೊರಟ್ಟಿಯವರ ತಂಡ ಭೇಟಿ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಅ. 3ರಿಂದ 6ರವರೆಗೆ ಪಶ್ಚಿಮ ಆಫ್ರಿಕಾದ ಅಕ್ರಾದಲ್ಲಿ ನಡೆದ 66ನೇ ಕಾಮನ್‌ವೆಲ್ತ್ ಪಾರ್ಲಿಮೆಂಟ್ ಸಮ್ಮೇಳನವನ್ನು ಯಶಸ್ವಿಯಾಗಿ ಮುಗಿಸಿದ ಸಭಾಪತಿ ಬಸವರಾಜ ಹೊರಟ್ಟಿ ಅವರ ತಂಡ ಯುರೋಪ್ ದೇಶಗಳತ್ತ ಹೊರಟು ವಿವಿಧ ಕ್ಷೇತ್ರಗಳಿಗೆ ಭೇಟಿ ನೀಡಿ ಅಧ್ಯಯನ ನಡೆಸುತ್ತಿದ್ದಾರೆ.



ರವಿವಾರ ರೋಮ್‌ನ ಜೂರಿಚ್‌ನ ವಿವಿಧ ಪ್ರದೇಶಗಳಿಗೆ ಭೇಟಿ ನೀಡಿ ಅಲ್ಲಿನ ಪರಿಸರ, ಸ್ವಚ್ಛತೆ, ಆರೋಗ್ಯ, ಸ್ಥಳೀಯ ಆಡಳಿತ, ಕಾನೂನು ಮತ್ತು ಸುವ್ಯವಸ್ಥೆ, ಶೈಕ್ಷಣಿಕ ಚಟುವಟಿಕೆಗಳು, ಅಲ್ಲಿನ ನಾಗರಿಕರ ದೈನಂದಿನ ವ್ಯವಹಾರಗಳು, ಜೀವನ ಪದ್ಧತಿ ಮುಂತಾದ ಸಂಗತಿಗಳ ಕುರಿತು ವಿವಿಧ ಕ್ಷೇತ್ರಗಳಿಗೆ ಭೇಟಿ ನೀಡಿ ಅಧ್ಯಯನ ಜೊತೆಗೆ ಮಾಹಿತಿ ಪಡೆದರು.

ಇದೇ ಸಂದರ್ಭದಲ್ಲಿ ಅಲ್ಲಿನ ಪ್ರೇಕ್ಷಣೀಯ ಸ್ಥಳಗಳನ್ನು ಸಂದರ್ಶಿಸಿದರು. ಈ ಸಂದರ್ಭದಲ್ಲಿ ಕರ್ನಾಟಕ ವಿಧಾನಸಭೆಯ ಅಧ್ಯಕ್ಷ ಯು.ಟಿ ಖಾದರ್ ಸೇರಿದಂತೆ ದೇಶದ ವಿವಿಧ ರಾಜ್ಯದ ಪ್ರತಿನಿಧಿಗಳು, ಹಿರಿಯ ಅಧಿಕಾರಿಗಳಿದ್ದರು.

# 'ಕರ್ನಾಟಕ' ನಾಮಕರಣಕ್ಕೆ 50ರ ಸಂಭ್ರಮ

▶▶ ಮೊದಲನೇ ಪುಟದಿಂದ

ಈ ಹಿನ್ನಲೆಯಲ್ಲಿ ನಗರದ ಸುಂದರೀಕರಣಕ್ಕೆ ಸಂಬಂಧಿಸಿದ ಅಧಿಕಾರಿಗಳು ಈಗಿನಿಂದಲೇ ಕಾರ್ಯಪ್ರವತ್ತರಾಗಬೇಕು.

ವೀರನಾರಾಯಣ ದೇವಸ್ಥಾನ ದಿಂದ ಹೊರಡುವ ಮೆರವಣಿಗೆಯನ್ನು ಮೈಸೂರು ದಸರಾ ಮಾದರಿಯಲ್ಲಿ ಅಂಬಾರಿ ಮೇಲೆ ತಾಯಿ ಭುವನೇಶ್ವರಿ ಭಾವಚಿತ್ರದ ಮೆರವಣಿಗೆ ಆಯೋಜಿಸುವದರ ಜೊತೆಗೆ ಮೆರವಣಿಗೆಯಲ್ಲಿ ಮುಖ್ಯಮಂತ್ರಿಗಳನ್ನು ಕಾರ್ಯಕ್ರಮದ ಸ್ಥಳದವರೆಗೆ ಕರೆತರಲು ಚಿಂತಿಸಲಾಗುವುದು. ಮೆರವಣಿಗೆ ಜೊತೆಗೆ ಉತ್ತಮ ಸಾಂಸ್ಕೃತಿಕ ಕಲಾ ತಂಡಗಳ ಆಯ್ಕೆ ಮಾಡಬೇಕು.

ಈ ಕಾರ್ಯಕ್ರಮದ ನೈಜ ಸಂಭ್ರಮ ಹೆಚ್ಚಿಸಲು ಸಾರ್ವಜನಿಕರು, ಯುವಕರು, ಸಾಹಿತ್ಯಾಸಕ್ತರು ಪಾಲ್ಗೊಳ್ಳುವಂತೆ ಅಗತ್ಯದ ಕ್ರಮ ಕೈಗೊಳ್ಳಬೇಕು. ಕಾರ್ಯಕ್ರಮದ ಕುರಿತು ವೈಜ್ಞಾನಿಕವಾಗಿ ಹಾಗೂ ಅರ್ಥಪೂರ್ಣವಾಗಿ ಪ್ರಚಾರ ಕೈಗೊಳ್ಳಬೇಕು. ಕಾರ್ಯಕ್ರಮಕ್ಕೆ ಕಡಿಮೆ ಸಮಯವಕಾಶವಿದ್ದು ಈ ಕಡಿಮೆ ಅವಧಿಯಲ್ಲಿ ಕರ್ನಾಟಕ ನಾಮಕರಣಕ್ಕೆ 50 ವರ್ಷ ಸುವರ್ಣ ಸಂಭ್ರವವನ್ನು ಐತಿಹಾಸಿಕ ಕಾರ್ಯಕ್ರಮವನ್ನಾಗಿ ಮಾಡಲು ಸಚಿವ ಎಚ್.ಕೆ.ಪಾಟೀಲ ಸೂಚಿಸಿದರು.

ಈ ಸುವರ್ಣ ಸಂಭ್ರಮದ ಕಾರ್ಯಕ್ರಮದ ಯಶಸ್ವಿ ಆಯೋಜನೆಗಾಗಿ ಸಮಿತಿಗಳನ್ನು ರಚಿಸಿ ಅಧಿಕಾರಿಗಳಿಗೆ ಜವಾಬ್ದಾರಿ ಹಂಚಿಕೆ ಮಾಡುವದರ ಜೊತೆಗೆ ಕಾರ್ಯಕ್ರಮದ ರೂಪುರೇಷೆಗಳನ್ನು ತಯಾರಿಸಬೇಕು. ವಿವಿಧ ಇಲಾಖೆಗಳ ವಸ್ತು ಪ್ರದರ್ಶನ ಮಳಿಗೆಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಬೇಕು. ಕಾರ್ಯಕ್ರಮದಲ್ಲಿ ಪುಸ್ತಕಗಳ ಬಿಡುಗಡೆ ಜೊತೆಗೆ ಪ್ರವಾಸೋದ್ಯಮ ದೃಷ್ಟಿಯಿಂದ ಹೊಸ ಸೃಷ್ಟಿಗಳನ್ನು ತರುವಂತೆ ತಿಳಿಸಿದರು. ಸಭೆ ಆರಂಭಕ್ಕೂ ಮುನ್ನ ಸಚಿವ ಎಚ್.ಕೆ.ಪಾಟೀಲ 50 ವರ್ಷಗಳ ಹಿಂದೆ ಕರ್ನಾಟಕ ನಾಮಕರಣಕ್ಕೆ ಗದುಗಿನ ಪಾತ್ರದ ಕುರಿತ ಇತಿಹಾಸವನ್ನು ಮೆಲಕು ಹಾಕಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ, ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಉಪವಿಭಾಗಾಧಿಕಾರಿ ಡಾ.ವೆಂಕಟೇಶ ನಾಯ್ಕ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

**ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**

ಪಿನ್ ಕೋಡ್ ನಂ. 582101. ದೂರವಾಣಿ: 08372-278003.

ಇ ಮೇಲ್:uda-gadag@hotmail.com

ಸಂ: ನಅಪ್ರಾಗಬೆ/ಭೂ.ಉ.ಬ/ಎಲ್.ಬಿ.ಪಾ.ಸ್-00069/2023-24 ದಿನಾಂಕ: 09-10-2023

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ ಶ್ರೀಮತಿ ನಿರ್ಮಲಾ ಹಸಮುಕ ಬಾಫಣಾ ಈ ಕೆಳಕಂಡ ಜಮೀನನ್ನು ಭೂ ಉಪಯೋಗ ಬದಲಾವಣೆ ಮಾಡಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ಬದಲಾವಣೆಯಿಂದ ಸ್ಥಳದಲ್ಲಿ ವಾಣಿಜ್ಯ ನಿವೇಶನವನ್ನು ಮಾಡಲು ಉದ್ದೇಶಿಸಿರುತ್ತಾರೆ. ವಾಣಿಜ್ಯ ಚಟುವಟಿಕೆಗಳಿಂದಾಗಿ ಸಾರ್ವಜನಿಕರಿಗೆ ಉದ್ಯೋಗ ಅವಕಾಶಗಳು ದೊರೆಯುತ್ತವೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ **14(ಎ)** ರಂತೆ ಭೂ ಉಪಯೋಗ ಬದಲಾವಣೆ ಮಾಡುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ 15 (ಹದಿನೈದು) ದಿನಗಳೊಳಗಾಗಿ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ-582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 01 | ಗದಗ | 124/*/16 | 00ಎಕರೆ-05 ಗುಂ-08ಆಣೆ | ವಸತಿ | ವಾಣಿಜ್ಯ (ಮಳಿಗೆಗಳು) |

ಸಹಿ/- ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ, ಗದಗ-ಬೆಟಗೇರಿ

ವಾ.ಸಾ.ಇ./ಗದಗ/242/2023-24/ದೇಶಪಾಂಡೆಪಬ್ಲಿಸಿಟಿ

ಕರ್ನಾಟಕ ಸರ್ಕಾರ (ಜಿಲ್ಲಾ ಪಂಚಾಯತ್ ಗದಗ)

**ಉಪ ನಿರ್ದೇಶಕರು (ಆಡಳಿತ) ಕಾರ್ಯಾಲಯ, ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ, ಗದಗ-582 103**

ದೂರವಾಣಿ : 08372-2274069 ಇ-ಮೇಲ್- gdgddahvs@gmail.com

ಸಂಖ್ಯೆ:ಉನಿಗ/ಪಪಾಇ/ಅ-2/ಗ.ಯಂ.ನಿ/ಟೆಂಡರ್/2023-24

ದಿನಾಂಕ : 09-10-2023

**ಟೆಂಡರ್ ಅಧಿಸೂಚನೆ**

ಉಪನಿರ್ದೇಶಕರು(ಆಡಳಿತ) ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಗದಗ ಕಛೇರಿಯಲ್ಲಿ ಒಬ್ಬರು ಗಣಕಯಂತ್ರ ನಿರ್ವಾಹಕರನ್ನು ಹೊರ ಸಂಪನ್ಮೂಲ ಸಂಸ್ಥೆಗಳಿಂದ ಸೇವೆ ಪಡೆಯಲು ಒಂದು ವರ್ಷದ ಅವಧಿಗೆ ಅಂದರೆ ಜೂನ್-2023 ರಿಂದ ಎಪ್ರೀಲ್-2024ರ ವರೆಗೆ (ದಿ:01-06-2023 ರಿಂದ 30-04-2024) ಕೆ.ಟಿ.ಟಿ.ಪಿ. ನಿಯಮಾನುಸಾರ ವಿಧಿಸಿರುವ ಷರತ್ತು ಗೊಳಪಟ್ಟು ಎರಡು ಲಕೋಟೆಗಳ ಪದ್ದತಿಯಲ್ಲಿ ಟೆಂಡರ್‌ನ್ನು ಕರೆಯಲಾಗಿದೆ. ಆಸಕ್ತಿಯುಳ್ಳ ಹೊರ ಸಂಪನ್ಮೂಲ ಸಂಸ್ಥೆಯವರು ರೂ. **1000** (ಜಿಎಸ್‌ಟಿ) ರೂಗಳನ್ನು ಸಂದಾಯ ಮಾಡಿ ಫಾರಂಗಳನ್ನು ಪಡೆಯಬಹುದಾಗಿದೆ. ಭರ್ತಿಮಾಡಿದ ಫಾರಂಗಳನ್ನು ದಿ : **09-10-2023** ರಿಂದ **17-10-2023** ರ ವರೆಗೆ ಸಂಜೆ 4-00 ಗಂಟೆಯವರೆಗೆ ಟೆಂಡರ ಫಾರಂಗಳನ್ನು ಪಡೆಯಬಹುದಾಗಿದೆ. ಭರ್ತಿಮಾಡಿದ ಫಾರಂಗಳನ್ನು ದಿನಾಂಕ : **18-10-2023** ರಂದು ಸಂಜೆ 4-00 ಗಂಟೆಯೊಳಗೆ ಟೆಂಡರ್ ಅರ್ಜಿಗಳನ್ನು ಸಲ್ಲಿಸುವುದು ಅಂದೇ ಸಂಜೆ 4-30ಗಂಟೆಗೆ ಮುಖ್ಯ ಲೆಕ್ಕಾಧಿಕಾರಿಗಳು ಜಿಲ್ಲಾ ಪಂಚಾಯತ ಗದಗ ಇವರ ಕೊಠಡಿಯಲ್ಲಿ ಟೆಂಡರ್ ತೆರೆದು ಅಂತಿಮಗೊಳಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಈ ಕಛೇರಿಗೆ ಸಂಪರ್ಕಿಸಬಹುದಾಗಿದೆ. ದೂರವಾಣಿ ಸಂಖ್ಯೆ : **08372-295153**

ಸಹಿ/- ಉಪ ನಿರ್ದೇಶಕರು, (ಆಡಳಿತ)
ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ಗದಗ.

ವಾಸಾಸಂಇ/ಗದಗ/ಕೆಎಸ್‌ಎಂಸಿಎ/237/2023-24

## ಜೆಡಿಎಸ್ ಪುನಶ್ಚೇತನ ಕುರಿತು ಕೋರ್ ಕಮಿಟಿ ಸಭೆ




■ ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿಯಲ್ಲಿ ಅ.12ರಂದು ಬೆಳಗ್ಗೆ 11ಕ್ಕೆ ಜೆಡಿಎಸ್ ಪಕ್ಷದ ಪುನಶ್ಚೇತನ ಕುರಿತು ಕೋರ್ ಕಮಿಟಿ ಸಭೆ ಹಮ್ಮಿಕೊಳ್ಳಲಾಗಿದೆ ಎಂದು ಮಾಜಿ ಸಚಿವ, ಜೆಡಿಎಸ್ ಮುಖಂಡ ಅಲ್ಕೋಡ ಹನಮಂತಪ್ಪ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಕೋರ್ ಕಮಿಟಿ ಅಧ್ಯಕ್ಷ ಜಿ.ಟಿ ದೇವೇಗೌಡ ನೇತೃತ್ವದಲ್ಲಿ ಸಭೆ ಹಮ್ಮಿಕೊಳ್ಳಲಾಗಿದೆ. ಸಭೆಯಲ್ಲಿ ಎಲ್ಲಾ ಜಿಲ್ಲೆಗಳಿಂದ ವಿವಿಧ ಚುನಾವಣೆಗಳಲ್ಲಿ ಸ್ಪರ್ಧಿಸಿ ಸೋತ ಅಭ್ಯರ್ಥಿಗಳು, ತಾ.ಪಂ, ಜಿ.ಪಂ ಮಾಜಿ ಸದಸ್ಯರು, ಪಕ್ಷದ ವಿವಿಧ ಘಟಕಗಳ ಪದಾಧಿಕಾರಿಗಳು ಭಾಗವಹಿಸುವರು ಎಂದರು.

ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದು ಹಲವಾರು ತಿಂಗಳು ಕಳೆದಿದ್ದರೂ ಸಹ ಅಭಿವೃದ್ಧಿ ಶೂನ್ಯವಾಗಿದೆ. ರಾಜ್ಯದ ಜನರ ಸಹಲವಾರು ಸಮಸ್ಯೆಗಳನ್ನು ಸರಕಾರ ಸಂಪೂರ್ಣವಾಗಿ ಮರೆತಿದ್ದು, ಇದೊಂದು ಗ್ಯಾರಂಟಿ ಸರಕಾರವಾಗಿದೆ ಎಂದರು.

ಶಕ್ತಿ ಯೋಜನೆಯೊಂದನ್ನು ಬಿಟ್ಟು ಬೇರೆ ಯಾವ ಯೋಜನೆಗಳು ಸಹ ಶೇ.100ರಷ್ಟು ಅನುಷ್ಠಾನ ಆಗಿಲ್ಲ. ಉಚಿತ ವಿದ್ಯುತ್ ನೀಡುವುದಾಗಿ ಹೇಳಿ ಈಗ ಅನಯಮಿತ ಲೋಡ್ ಶೆಡ್ಡಿಂಗ್ ಜಾರಿ ಮಾಡುತ್ತಿದ್ದಾರೆ. ಯುವಕರಿಗೆ ವಿದ್ಯಾನಿಧಿ ನೀಡುತ್ತೇವೆಂದು ಹೇಳಿ, ಇದುವರೆಗೂ ಜಾರಿಗೊಳಿಸಿಲ್ಲ ಎಂದರು.

ಮುಖ್ಯಮಂತ್ರಿ ಸಿದ್ಧರಾಮಯ್ಯರಿಗೆ ಸ್ವತಂತ್ರವಾಗಿ ಅಧಿಕಾರ ಮಾಡಲು ಬಿಡುತ್ತಿಲ್ಲ. ಪಕ್ಷದ ಮುಖಂಡರ ವ್ಯತಿರಿಕ್ತ ಹೇಳಿಕೆಗಳು ಕಾಂಗ್ರೆಸ್ ಸರಕಾರದಲ್ಲಿ ಎಲ್ಲವೂ ಸರಿ ಇಲ್ಲ ಎಂದು ಬಿಂಬಿಸುತ್ತಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಮಹಿಳಾ ಘಟಕದ ಮಂಜುಳಾ, ಅನಿಲಕುಮಾರ, ಪ್ರಭುರಾಜಗೌಡ ಪಾಟೀಲ, ಸಿ.ಎಸ್ ಪಾಟೀಲ, ಸೋಂಪೂರ, ಸಿ.ಎಸ್ ಹಿರೇಮನಿಪಾಟೀಲ, ಯಲ್ಲಪ್ಪ, ಅಂದಾನಪ್ಪ ಇದ್ದರು.

## ಯೋಗ ಸ್ಪರ್ಧೆಯಲ್ಲಿ ಸಾಧನೆ



■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಪಟ್ಟಣದ ಎಸ್.ಎಂ ಭೂಮರಡ್ಡಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿನಿ ಶ್ರೀದೇವಿ ಹ್ಯಾಡ್ಲಮಠ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಯೊಗಾಸನ ಸ್ಪರ್ಧೆಯಲ್ಲಿ ವಿಭಾಗ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಸಪ್ತ ಶ್ರೀ ಯೋಗಧಾರ ಸ್ಪೋರ್ಟ್ಸ್ ಅಕಾಡೆಮಿ ದಾವಣಗೆರೆ ಅವರು ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ಆಯೋಜಿಸಲಾದ ಮೊದಲ ರಾಷ್ಟ್ರೀಯ ಮಹಿಳಾ ಮುಕ್ತ ಯೋಗಾಸನ ಸ್ಪರ್ಧೆಯಲ್ಲಿ ಆಯ್ಕೆಯಾಗಿರುವ ಯೋಗಾಭ್ಯಾಸಿಗಳಾದ ದಿಶಾ ಆರ್. ಕೊಪ್ಪಳ 7–9 ವಯೋಮಿತಿಯಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಪಡೆದಿದ್ದಾಳೆ.

ಸೋನಿಯಾ ಶೇಟ್ 16–19 ವಯೋಮಿತಿಯಲ್ಲಿ ನಾಲ್ಕನೇ ಸ್ಥಾನ ಹಾಗೂ ಜ್ಯೋತಿ ಆರ್.ಕೊಪ್ಪಳ 33–40 ವಯೋಮಿತಿಯಲ್ಲಿ ನಾಲ್ಕನೇಯ ಸ್ಥಾನವನ್ನು ಗಳಿಸಿ ವಿಯೆಟ್ನಾಮ್‌ನಲ್ಲಿ ನಡೆಯುವ ಅಂತಾರಾಷ್ಟ್ರೀಯ ಯೋಗಾಸನ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ.

ಯೋಗ ನಿರ್ದೇಶಕಿ ಡಾ. ಮಂಗಳಾ ಇಟಗಿ, ಅನ್ಮೋಲ್ ಯೋಗ ಕೇಂದ್ರದ ದತ್ತು ಯೋಜನೆಯಲ್ಲಿ ಉಚಿತ ಯೋಗ ಶಿಕ್ಷಣ ಪಡೆದು ವಿಜೇತರಾಗಿ ಆಯ್ಕೆಯಾಗಿರುವ ವಿದ್ಯಾರ್ಥಿನಿಯರಿಗೆ ಯೋಗ ಪರಿವಾರದ ಸರ್ವ ಸದಸ್ಯರ ಪರವಾಗಿ ತುಂಬು ಹೃದಯದ ಅಭಿನಂದನೆಗಳನ್ನು ತಿಳಿಸಿದ್ದಾರೆ.

## ಪಶು ಚಿಕಿತ್ಸಾ ವಾಹನ ಶೀಘ್ರ ಕಾರ್ಯಾರಂಭ

■ ವಿಜಯಸಾಕ್ಷಿ ಸುದ್ದಿ, ರೋಣ

ಆರೋಗ್ಯ ಇಲಾಖೆಯ ತುರ್ತು ಚಿಕಿತ್ಸೆಗೆ ನೆರವಾಗುವ '108' ವಾಹನದ ಮಾದರಿಯಲ್ಲಿ ಈಗ ಪಶುಗಳಿಗೂ ಸಹ ತುರ್ತು ಚಿಕಿತ್ಸಾ ವಾಹನ ತಾಲೂಕಿಗೆ ಆಗಮಿಸಿದ್ದು, ಜಾನುವಾರುಗಳಿರುವ ಸ್ಥಳಕ್ಕೆ ವೈದ್ಯರುಗಳು ಆಗಮಿಸಿ ಚಿಕಿತ್ಸೆ ನೀಡುವ ಕಾರ್ಯ ಶೀಘ್ರವೇ ಆರಂಭಗೊಳ್ಳಲಿದೆ.

ಸಂಚಾರಿ ತುರ್ತು ಪಶು ಚಿಕಿತ್ಸಾ ವಾಹನದಲ್ಲಿ ಓರ್ವ ವೈದ್ಯ, ಸಹಾಯಕ ಸೇರಿದಂತೆ ಅಗತ್ಯ ಔಷಧಿಗಳು ಲಭ್ಯವಿರಲಿವೆ. ಜಿಲ್ಲೆಗೆ ಒಟ್ಟು 8 ಪಶು ಚಿಕಿತ್ಸಾ ವಾಹನಗಳು ಬಂದಿದ್ದು, ಅದರಲ್ಲಿ ರೋಣ, ಗಜೇಂದ್ರಗಡ ತಾಲೂಕಿಗೆ ತಲಾ ಒಂದು ವಾಹನವನ್ನು ಈಗಾಗಲೇ ಒದಗಿಸಲಾಗಿದೆ.




ಈ ಕುರಿತು ಡಾ. ಬಿ.ಎಸ್ ಕುರಹಟ್ಟಿ ಮಾತನಾಡಿ, '108' ವಾಹನದ ಮಾದರಿಯಲ್ಲಿ ಈ ವಾಹನ ಕೂಡ ತನ್ನ ಸೇವೆಯನ್ನು ರೈತರಿಗೆ ನೀಡಲಿದೆ. ರೈತರು 1962 ಸಂಖ್ಯೆಗೆ ಕರೆ ಮಾಡಿದರೆ ವಾಹನ ಜಾನುವಾರುಗಳಿದ್ದ ಸ್ಥಳಕ್ಕೆ ಬರುತ್ತದೆ. ಜೊತೆಗೆ ಉತ್ತಮ ಚಿಕಿತ್ಸೆಯನ್ನು ಸಹ ಒದಗಿಸುತ್ತದೆ. ಸರಕಾರದ ನಿಯಮದ ಪ್ರಕಾರ ವಾಹನದ ವಿಮಾ ದಾಖಲಾತಿ ಪಡೆದು, ಶಾಸಕರ ಉಪಸ್ಥಿತಿಯಲ್ಲಿ ಶೀಘ್ರವೇ ಪಶು ಚಿಕಿತ್ಸಾ ವಾಹನ ಸಂಚಾರಕ್ಕೆ ಅನುವು ಮಾಡಲಾಗುವುದು ಎಂದರು.

## ಸಂತರ ಸ್ಮರಣೆಯಿಂದ ನಕಾರಾತ್ಮಕ ವಿಚಾರಗಳು ದೂರಾಗುತ್ತವೆ



■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಪುಟ್ಟರಾಜ ಕವಿ ಗವಾಯಿಗಳವರ 13ನೇ ಹಾಗೂ ಅಲ್ಲಮಪ್ರಭುದೇವರ ಮಠದ ಬಸವರಾಜ ಸ್ವಾಮೀಜಿಗಳ 11ನೇ ಪುಣ್ಯಸ್ಮರಣೋತ್ಸವ ಕಾರ್ಯಕ್ರಮ ಇಲ್ಲಿಯ ಪುಟ್ಟರಾಜ ಸೇವಾ ಸಮಿತಿಯ ಆಶ್ರಯದಲ್ಲಿ ನೆರವೇರಿತು.

ಗ್ರಾಮ ಪಂಚಾಯತ ಆವರಣದಲ್ಲಿ ಏರ್ಪಡಿಸಲಾಗಿದ್ದ ಕಾರ್ಯಕ್ರಮದಲ್ಲಿ ಬೆಳಿಗ್ಗೆ ಉಭಯ ಶ್ರೀಗಳ ಭಾವಚಿತ್ರಕ್ಕೆ ಶಂಕ್ರಯ್ಯ ಹಿರೇಮಠ ಅವರ ನೇತೃತ್ವದಲ್ಲಿ ಧಾರ್ಮಿಕ ವಿಧಿ–ವಿಧಾನಗಳೊಂದಿಗೆ ವಿಶೇಷ ಪೂಜಾ ಕೈಂಕರ್ಯಗಳು ಜರುಗಿದವು. ನಂತರ ಮಹಾ ಅನ್ನಸಂತರ್ಪಣೆ ನಡೆಯಿತು.

ಸಂಜೆ ಪುಟ್ಟರಾಜ ಗ್ರಾಮೀಣಾಭಿವೃದ್ಧಿ ಹಾಗೂ ಸಾಂಸ್ಕೃತಿಕ ಕಲಾಮೇಳ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ನಡೆದ ಸಂಗೀತ ಕಾರ್ಯಕ್ರಮವನ್ನು ಶಂಕ್ರಯ್ಯ ಹಿರೇಮಠ ಉದ್ಘಾಟಿಸಿ ಮಾತನಾಡಿ, ಪುಟ್ಟರಾಜ ಗವಾಯಿಗಳು ಹಾಗೂ ಬಸವರಾಜ ಸ್ವಾಮಿಜೀಗಳು ಈ ನಾಡು ಕಂಡ ಅಪ್ರತಿಮ ಸಂತರು.

ಅಂಧ–ಅನಾಥರ ಜೀವನಕ್ಕೆ ಬೆಳಕಾಗಿ ಸಮಾಜಕ್ಕೆ ಜ್ಞಾನವನ್ನು ನೀಡಿದವರು. ಅಂಥವರ ಸ್ಮರಣೆಯಿಂದ ನಮ್ಮಲ್ಲಿಯ ನಕಾರಾತ್ಮಕ ವಿಚಾರಗಳು ದೂರವಾಗಿ ಸಕಾರಾತ್ಮಕ ವಿಚಾರಗಳು ಮೂಡುವವು ಎಂದರು.

ಅನಸೂಯಾ ಭೂಮಣ್ಣವರ, ರತ್ನಾ ಮುರಾರಿ, ಇಮ್ರಾನ್ ಕೊರ್ಲಹಳ್ಳಿ, ಈರಪ್ಪ ಕರಿಯಲ್ಲಪ್ಪನವರ, ಬಸನಗೌಡ ಪಾಟೀಲ ಸಂಗೀತ ಸೇವೆ ನೀಡಿದರು. ಗ್ರಾ.ಪಂ ಮಾಜಿ ಸದಸ್ಯ ರಾಮಣ್ಣ ನಿಡಗುಂದಿ, ಸೇವಾ ಸಮಿತಿಯ ಅಧ್ಯಕ್ಷ ಕೇಶವ ಗುದಗಿ, ಅಶೋಕ ಮೇಟಿ, ಪ್ರವೀಣ ಕಲಾಲ ಉಪಸ್ಥಿತರಿದ್ದರು.

### ಶಿರಹಟ್ಟಿಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರಿಂದ 'ಜನತಾ ದರ್ಶನ' ಇಂದು

# ಸಾರ್ವಜನಿಕರಲ್ಲಿ ಹೆಚ್ಚಿದ ನಿರೀಕ್ಷೆ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಜಿಲ್ಲಾ ಮಟ್ಟದ ಅಧಿಕಾರಿಗಳು ತಾಲೂಕಾ ಕೇಂದ್ರಗಳಿಗೆ ತೆರಳಿ, ಜನತಾ ದರ್ಶನ ಕಾರ್ಯಕ್ರಮದ ಮೂಲಕ ಜನತೆಯ ಅಹವಾಲುಗಳನ್ನು ಸ್ವೀಕರಿಸಿ, ಸಮಸ್ಯೆಗಳಿಗೆ ಪರಿಹಾರೋಪಾಯಗಳನ್ನು ಒದಗಿಸಲು ಸರ್ಕಾರ ನಿರ್ದೇಶನ ನೀಡಿದ್ದರಿಂದ ಅ.10ರಂದು ಶಿರಹಟ್ಟಿ ಪಟ್ಟಣದ ತಾಲೂಕಾ ಪಂಚಾಯತ ಸಾಮರ್ಥ್ಯ ಸೌಧದ ಸಭಾಭವನದಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರು ಜನತಾ ದರ್ಶನ ಕಾರ್ಯಕ್ರಮದ ಮೂಲಕ ಸಾರ್ವಜನಿಕರ ಅಹವಾಲು ಸ್ವೀಕರಿಸಲಿದ್ದಾರೆ.

**ಸಾರ್ವಜನಿಕರಲ್ಲಿ ಹೆಚ್ಚಿದ ನಿರೀಕ್ಷೆ:** ತಮ್ಮ ಸಮಸ್ಯೆಗಳನ್ನು ಆಲಿಸಿ ಅವುಗಳಿಗೆ ಪರಿಹಾರ ಕಲ್ಪಿಸಲು ಜಿಲ್ಲಾಧಿಕಾರಿಗಳೇ ಸ್ವತಃ ತಮ್ಮ ಬಳಿ ಬರುತ್ತಿರುವ ಹಿನ್ನೆಲೆಯಲ್ಲಿ ಶಿರಹಟ್ಟಿ ಪಟ್ಟಣವೂ ಸೇರಿದಂತೆ ವಿವಿಧ ಗ್ರಾಮೀಣ ಪ್ರದೇಶಗಳಲ್ಲಿಯ ಜನತೆ ತಾಲೂಕಾ/ಜಿಲ್ಲಾ ಕೇಂದ್ರಗಳಲ್ಲಿ ಆಗಬೇಕಿರುವ ಕೆಲಸಗಳು ವಿಳಂಬವಾಗಿದ್ದರೆ, ಅಧಿಕಾರಿಗಳು ಸತಾಯಿಸುತ್ತಿದ್ದರೆ ಹೀಗೆ ಹತ್ತು ಹಲವಾರು ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ನಿರೀಕ್ಷೆ



ಹೆಚ್ಚಾಗಿದೆ. ಈ ಹಿಂದೆಯೂ ಸಹ ಜಿಲ್ಲೆಯ ಅಧಿಕಾರ ವಹಿಸಿಕೊಂಡ ನಂತರ ಪ್ರಥಮ ಬಾರಿಗೆ ಹೆಬ್ಬಾಳ ಹಾಗೂ ಹೊಳಲಾಪೂರ ಗ್ರಾಮದಲ್ಲಿ ಜನಸ್ಪಂದನ ಸಭೆಯನ್ನು ಡಿಸಿ ವೈಶಾಲಿ ಎಂ.ಎಲ್ ಅವರು ನಡೆಸಿ ಯಶಸ್ವಿಯಾಗಿದ್ದರು.

**ಗ್ಯಾರಂಟಿ ಯೋಜನೆಗಳ ಪ್ರಗತಿ:** ಸರಕಾರ ಜಾರಿಗೊಳಿಸಿರುವ ಗ್ಯಾರಂಟಿ ಯೋಜನೆಗಳನ್ನು ಅ.2ರ ಒಳಗೆ ಶೇ 100ರಷ್ಟು ಪ್ರಗತಿಯನ್ನು ಸಾಧಿಸಬೇಕೆಂದು ಕಳೆದ ತಿಂಗಳು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ ಪಾಟೀಲರು ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಿ ಹಾಗೂ ಕಚೇರಿಗಳಿಗೆ ಅಧಿಕಾರಿಗಳು ನಿಗದಿತ ಸಮಯದಲ್ಲಿ ಹಾಜರ್ ಇರುವುದಕ್ಕಾಗಿ ಎಲ್ಲ ಕಚೇರಿಗಳಲ್ಲಿಯೂ ಬಯೋಮೆಟ್ರಿಕ್ ಹಾಗೂ ಸಿಸಿ ಕ್ಯಾಮರಾ ಅಳವಡಿಸಿಕೊಳ್ಳುವಂತೆಯೂ ಸೂಚನೆಯನ್ನು ನೀಡಿದ್ದರು. ಇಲ್ಲಿಯವರೆಗೂ ಇನ್ನೂ ಕೆಲವು ಇಲಾಖೆಗಳಲ್ಲಿ ಈ ಕೆಲಸ ಆಗದೇ ಇರುವುದು ವಿಪರ್ಯಾಸ.

ಮಾಸಿಕ ಕೆಡಿಪಿ ಸಭೆಯಲ್ಲೂ ಸಹ ತಾ.ಪಂ ಆಡಳಿತಾಧಿಕಾರಿ ಎ.ಎ ಕಂಬಾಳಿಮಠ ಸಚಿವರ ಸೂಚನೆಯನ್ನು ಕಡ್ಡಾಯವಾಗಿ ಎಲ್ಲರೂ ಪಾಲಿಸಬೇಕೆಂದು ಸೂಚನೆ ನೀಡಿದ್ದರು. ಗೃಹಲಕ್ಷ್ಮೀ ಯೋಜನೆಯಡಿ ಹಣ ಬರದೇ ಇರುವ ಫಲಾನುಭವಿಗಳು ನಿತ್ಯವೂ ಬ್ಯಾಂಕು, ಕಚೇರಿ ಮತ್ತು ಸೈಬರ್ ಸೆಂಟರ್‌ಗಳಿಗೆ ಅಲೆದಾಡುತ್ತಿದ್ದಾರೆ. ಇವರಿಗೆ ಸ್ಪಷ್ಟ ಉತ್ತರವನ್ನು ಸಹ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ನೀಡದೇ ಇರುವ ಬಗ್ಗೆ ಅನೇಕ ದೂರುಗಳು ಕೇಳಿ ಬರುತ್ತಿವೆ. ಇದಕ್ಕೆ ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಯಾವ ರೀತಿ ಸಂದೇಶ ರವಾನಿಸುತ್ತಾರೆಂಬುದನ್ನು ಕಾದು ನೋಡಬೇಕಿದೆ.

**ಪ್ರಚಾರದ ಕೊರತೆ?:** ಜನತಾದರ್ಶನ ಕಾರ್ಯಕ್ರಮದ ಮೂಲಕ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಲು ಜಿಲ್ಲಾಧಿಕಾರಿಗಳು ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿದ್ದಾರೆ. ಆದರೆ, ತಾಲೂಕಾ ಮಟ್ಟದಲ್ಲಿ ಈ ಕಾರ್ಯಕ್ರಮದ ಬಗ್ಗೆ ಹೆಚ್ಚಿನ ರೀತಿಯಲ್ಲಿ ಗ್ರಾಮೀಣ ಪ್ರದೇಶಗಳಲ್ಲೂ ಸಹ ವ್ಯಾಪಕವಾಗಿ ಪ್ರಚಾರದ ಅವಶ್ಯಕತೆಯಿತ್ತು. ಫೆ.9ರಂದು ಶಿರಹಟ್ಟಿ ತಹಸೀಲ್ದಾರ ಈ ಬಗ್ಗೆ ಸಾರ್ವಜನಿಕ ಪ್ರಕಟಣೆಯನ್ನು ಹೊರಡಿಸಿದ್ದಾರೆ. ಹೀಗಾಗಿ ಪ್ರಚಾರದ ಕೊರತೆ ಕೊಂಚ ಎದ್ದು ಕಾಣುತ್ತಿತ್ತು.




ಈ ಕುರಿತು ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜನತಾದರ್ಶನ ಕಾರ್ಯಕ್ರಮದ ಮೂಲಕ ಶಿರಹಟ್ಟಿ ತಾಲೂಕಿನ ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿ, ಎಲ್ಲ ಅರ್ಜಿಗಳನ್ನು ಚಾಲ್ತಿಯಲ್ಲಿರುವ ಸಾರ್ವಜನಿಕ ಕುಂದು ಕೊರತೆ ನಿವಾರಣಾ ವ್ಯವಸ್ಥೆ ತಂತ್ರಾಂಶದಲ್ಲಿ ದಾಖಲಿಸಿ, ಅರ್ಜಿಗಳನ್ನು ವಿಲೇವಾರಿ ನಿರ್ವಹಿಸಿ ನಿಗದಿತ ಕಾಲಾವಧಿಯೊಳಗೆ ನಿಯಮಾನುಸಾರ ಪರಿಹಾರೋಪಾಯಗಳನ್ನು ಒದಗಿಸಲು ಕ್ರಮ ಕೈಕೊಳ್ಳಲಾಗುವುದು ಎಂದರು.

## ದೊಡ್ಡಮೇಟಿ ಸ್ಮಾರಕ ನಿರ್ಮಾಣದ ನಡೆ ಅಭಿನಂದನಾರ್ಹ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಜನತೆಯ ಬಹು ವರ್ಷಗಳ ಒತ್ತಾಸೆಯಂತೆ ರಾಜ್ಯ ಸರ್ಕಾರ ಕರ್ನಾಟಕ ಏಕೀಕರಣದ ಪ್ರಮುಖ ರೂವಾರಿ ದಿ.ಅಂದಾನಪ್ಪ ದೊಡ್ಡಮೇಟಿ ಅವರ ಸ್ಮಾರಕ ನಿರ್ಮಾಣಕ್ಕೆ ಮುಂದಾಗಿದ್ದು ಅಭಿನಂದನಾರ್ಹ ಎಂದು ಪುರಸಭೆ ಸ್ಥಾಯಿ ಸಮಿತಿ ಮಾಜಿ ಚೇರಮನ್ ಶರಣಪ್ಪ ರೇವಡಿ ಹೇಳಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ದೇಶದ ರಾಜಕಾರಣ ವ್ಯವಸ್ಥೆಯಲ್ಲಿ ಸರಳ ಹಾಗೂ ಸಜ್ಜನ ರಾಜಕಾರಣಿ ಎಂದು ಹೆಸರಾಗಿದ್ದ ದಿ.ಅಂದಾನಪ್ಪ ದೊಡ್ಡಮೇಟಿ ಅವರ ಸ್ಮಾರಕ



ನಿರ್ಮಾಣ ಮಾಡಬೇಕು ಎಂಬುದು ಜನತೆಯ ಒತ್ತಾಸೆಯಾಗಿತ್ತು. ಹೀಗಾಗಿ ದೊಡ್ಡಮೇಟಿ ಅವರ ಸ್ಮಾರಕ ನಿರ್ಮಾಣಕ್ಕೆ ಪ್ರಗತಿಪರರು ಹಾಗೂ ಕನ್ನಡಪರ ಸಂಘಟನೆಗಳಿಂದ ಆಗ್ರಹಗಳು ಕೇಳಿ ಬಂದಿದ್ದವು.

ಮಾಜಿ ಸಚಿವ ದಿ. ದೊಡ್ಡಮೇಟಿ ಅವರ ಸ್ಮಾರಕವನ್ನು ಜಕ್ಕಲಿ ಗ್ರಾಮದಲ್ಲಿ ಸ್ಥಾಪಿಸಲು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ ಪಾಟೀಲ, ಶಾಸಕ ಜಿ.ಎಸ್ ಪಾಟೀಲ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರಾದ ಶಿವಾರಜ ತಂಗಡಗಿ ಅವರಿಗೆ ಜನತೆಯ ಪರವಾಗಿ ಅಭಿನಂದನೆ ಸಲ್ಲಿಸುವುದರೊಂದಿಗೆ, ದೊಡ್ಡಮೇಟಿ ಅವರ ಕಲ್ಪನೆಯ ಕರ್ನಾಟಕದ ಮೊಟ್ಟ ಮೊದಲ ಭುವನೇಶ್ವರಿ ತಾಯಿ ಭಾವಚಿತ್ರವನ್ನು ವಿಧಾನಸೌಧ ಮತ್ತು ಶಾಸಕರ ಭವನದ ಎದುರು ಪ್ರತಿಮೆಯಾಗಿ ಸ್ಥಾಪಿಸಲು ಸರ್ಕಾರ ಮುಂದಾಗಬೇಕು ಎಂದು ಒತ್ತಾಯಿಸಿದ್ದಾರೆ.

## ಪೌರಕಾರ್ಮಿಕರ ಖಾಯಮಾತಿಗೆ ಸರ್ಕಾರ ಆದೇಶ: ಸಂಭ್ರಮಾಚರಣೆ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಕೋಟೆನಾಡಿನಲ್ಲಿನ ಪೌರ ಕಾರ್ಮಿಕರ ಬಹುದಿನಗಳ ಬೇಡಿಕೆಯಾಗಿದ್ದ ಖಾಯಮಾತಿ ವಿಚಾರವಾಗಿ ಸರ್ಕಾರ ಅಭಯ ನೀಡಿದೆ. ಈ ಹಿನ್ನೆಲೆಯಲ್ಲಿ ನಗರದಲ್ಲಿನ ಪೌರ ಕಾರ್ಮಿಕರು ತಮ್ಮ ಖುಷಿಯನ್ನು ಕೇಕ್ ಕತ್ತರಿಸಿ ಪರಸ್ಪರ ಬಣ್ಣ ಎರಚಿಕೊಂಡು, ಸಿಹಿ ಹಂಚಿ, ಕುಣಿದು ಕುಪ್ಪಳಿಸಿ, ಪೌರ ಕಾರ್ಮಿಕರ ಗೀತೆಯನ್ನು ಹಾಡುವ ಮೂಲಕ ಸಂಭ್ರಮಿಸಿದರು.

ಪುರಸಭೆ ಸದಸ್ಯ ರಾಜೂ ಸಾಂಗ್ಲೀಕರ ಮಾತನಾಡಿ, ಪಟ್ಟಣದ 38 ಪೌರ ಕಾರ್ಮಿಕರಿಗೆ ಸರ್ಕಾರದಿಂದ ಆದೇಶ ಪ್ರತಿ ಬಂದಿದ್ದು ಸಂತಸ ಮೂಡಿಸಿದೆ. ಪ್ರತಿನಿತ್ಯ ಮುಂಜಾನೆಯೇ ಪ್ರಾರಂಭವಾಗುವ ಇವರ ಕಾಯಕ ರಾತ್ರಿಯವರೆಗೂ ಇರುತ್ತದೆ. ಇದನ್ನು ಪರಿಗಣಿಸಿದ ಸರ್ಕಾರಕ್ಕೆ ಪೌರ



ಕಾರ್ಮಿಕರ ಪರವಾಗಿ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

ಪೌರ ಕಾರ್ಮಿಕರಾದ ಮಾಳವ್ವ ಅರಳಿಗಿಡದ, ದುರಗಪ್ಪ ಬಂಗಾಳಿಗಿಡದ, ಮಹಾಂತೇಶ ಮಾದರ ಮಾತನಾಡಿ, ನಾವು ಸುಮಾರು 20 ವರ್ಷಗಳಿಂದ ದಿನಗೂಲಿ ಆಧಾರದ ಮೇಲೆ ಕೆಲಸ ಮಾಡುತ್ತಾ ಬಂದಿದ್ದೇವೆ. ಕೊರೋನಾ ಸಂದರ್ಭದಲ್ಲಿ ಜೀವವನ್ನು ಪಣಕ್ಕಿಟ್ಟು ಕೆಲಸ ಮಾಡಿದ್ದೇವೆ. ಸರ್ಕಾರ ನಮ್ಮ ಕಾರ್ಯವನ್ನು ಗಮನಿಸಿ ಖಾಯಮಾತಿಗೆ ಆದೇಶ ನೀಡಿದ ಹಿನ್ನೆಲೆಯಲ್ಲಿ ಖುಷಿಯಾಗಿದೆ ಎಂದರು. ಈ ಸಂದರ್ಭದಲ್ಲಿ ನಜೀರಸಾಬ ಸಾಂಗ್ಲೀಕರ, ಮಾಳವ್ವ ಅರಳಿಗಿಡದ, ದುರಗವ್ವ ಕನ್ನಾಳ, ಶೋಭವ್ವ ಮಾದರ, ದುರಗಪ್ಪ ಬಂಗಾಳಿಗಿಡದ, ನಿಂಗಪ್ಪ ಮೂಲಿಮನಿಷ, ಮಹಾಂತೇಶ ಮಾದರ, ಸಂಗವ್ವ ಚಲವಾದಿ, ಮುದಕವ್ವ ಚಲವಾದಿ, ಭೀಮವ್ವ ಚಲವಾದಿ, ಶಾಂತವ್ವ ಚಲವಾದಿ, ಹನಮಂತಪ್ಪ ಚಲವಾದಿ ಸೇರಿದಂತೆ ಅನೇಕರು ಇದ್ದರು.

## ವೆಂಕಟಾಪೂರ ವೆಂಕಟೇಶ್ವರ ನವರಾತ್ರಿ ಉತ್ಸವ ಅ.15ರಿಂದ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸಮೀಪದ ವೆಂಕಟಾಪೂರ ಗ್ರಾಮದ ಉದ್ಭವ ಮೂರ್ತಿ ಲಕ್ಷ್ಮೀ ವೇಂಕಟೇಶ್ವರ ದೇವಸ್ಥಾನದಲ್ಲಿ ನವರಾತ್ರಿ ಉತ್ಸವವನ್ನು ಸಂಭ್ರಮ ಸಡಗರದಿಂದ ಆಚರಿಸಲಾಗುತ್ತಿದೆ.

ಅ.15ರಂದು ರವಿವಾರ ಬೆಳಿಗ್ಗೆ 10 ಗಂಟೆಗೆ ನವರಾತ್ರಿ ಉತ್ಸವದ ಘಟಸ್ಥಾಪನೆ ನೆರವೇರಲಿದೆ. ಅ.22ರಂದು ದುರ್ಗಾಷ್ಟಮಿ, ನವದುರ್ಗೆಯರ ಪೂಜಾ ಕೈಂಕರ್ಯ ಜರುಗುವುದು. ಅ.23ರಂದು ಆಯುಧ ಪೂಜೆ, ವಿಜಯ ದಶಮಿ ಹಾಗೂ ಬನ್ನಿ ಮುಡಿಯುವ ಕೈಂಕರ್ಯ ಜರುಗಲಿದೆ. ನವರಾತ್ರಿ ಉತ್ಸವದ ನಿಮಿತ್ತ ಪ್ರತಿದಿನ ಕಾಕಡಾರತಿ, ಮಾಹಾಭಿಷೇಕ, ಪುರಾಣ ಪಾರಾಯಣ, ನಿತ್ಯ ಮಾಹಾ ಪ್ರಸಾದ ಜರುಗಲಿದೆ ಎಂದು ಲಕ್ಷ್ಮೀ ವೆಂಕಟೇಶ್ವರ ದೇವಸ್ಥಾನದ ಅಧ್ಯಕ್ಷ ಎ.ಕೆ ತಮ್ಮಣ್ಣವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಿಧನ ವಾರ್ತೆ

### ಪದ್ಮಾವತಿ ಎಂ.ನೀಲಗುಂದ



**ಮುಳಗುಂದ:** ಪಟ್ಟಣದ ಸಂಗನಪೇಟಿ ಓಣಿಯ ನಿವಾಸಿ ಪದ್ಮಾವತಿ ಎಂ.ನೀಲಗುಂದ(75) ರವಿವಾರ ನಿಧನರಾಗಿದ್ದಾರೆ.

ಮೃತರು ಮೂವರು ಪುತ್ರರು, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ.

## ಕಲೆ ಮುಕ್ತಿಯನ್ನು ದಯಪಾಲಿಸುವ ಪ್ರಕಾರ

■ ವಿಜಯಸಾಕ್ಷಿ ಸುದ್ದಿ, ಗದಗ

ಕಲೆ ಅಂದರೆ ಕೇವಲ ಪ್ರದರ್ಶನಕ್ಕೆ ಸಂಬಂಧಿಸಿದ್ದಲ್ಲ. ವಿಮುಕ್ತಿಯನ್ನು ದಯಪಾಲಿಸುವ ಪ್ರಕಾರವನ್ನು ಕಲೆ ಅನ್ನೊ ಶಿರೋನಾಮೆ ಅಡಿ ಚರ್ಚಿಸುವಂಥದ್ದು ಎಂದು ಹಿರಿಯ ನಟ, ಚಿಂತಕ ಕೆ. ಸುಚೇಂದ್ರ ಪ್ರಸಾದ ಹೇಳಿದರು.

ನಗರದ ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರಿಂದ ಪ್ರಶಂಸಿಸಲ್ಪಟ್ಟ ಕಲಾಚೇತನ ಸಾಂಸ್ಕೃತಿಕ ಅಕಾಡೆಮಿಯ 26ನೇ ವರ್ಷದ ಕಾರ್ಯಕ್ರಮ ನಾದ–ಬೋಧ ಹಾಗೂ ಕಲಾಚೇತನ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಆಧುನಿಕ ಕಾಲಘಟ್ಟದಲ್ಲಿ ಕಲೆ, ಸಂಸ್ಕೃತಿ ಮತ್ತು ಆಚರಣೆಗಳನ್ನು ಅಸಡ್ಡೆ, ಅನಾದರದಿಂದ ನೋಡುತ್ತಿದ್ದೇವೆ. ಯಾವುದನ್ನು ಸ್ವೀಕಾರ ಮಾಡಬೇಕು ಎನ್ನುವ ಮನೋಭಾವ ಮತ್ತು ಶಿಕ್ಷಣವೂ



ಇಲ್ಲವಾಗಿದೆ. ಯಾವುದು ಬೇಡವೂ ಅದನ್ನು ಒಪ್ಪಿಕೊಳ್ಳುವ ಮನಸ್ಥಿತಿಗೆ ಬಂದು ತಲುಪಿದ್ದೇವೆ. ಇಂಥ ಸಂದಿಗ್ಧ ಪರಿಸ್ಥಿತಿಯಲ್ಲೂ ಕಲಾಚೇತನ ಸಂಸ್ಥೆ ನಿರಂತರವಾಗಿ ಚಟುವಟಿಕೆ ನಡೆಸುವ ಮೂಲಕ ಭವಿಷ್ಯದ ಕಾಲಘಟ್ಟಕ್ಕೆ ಸ್ವೀಕರಿಸಬೇಕಾಗಿರುವುದನ್ನು ನೀಡುತ್ತಿದೆ ಎಂದರು.

ಕಲಾಚೇತನ ಸಂಸ್ಥೆ ಕುರಿತು ಪ್ರಧಾನಿ ನರೇಂದ್ರ ಮೋದಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ ಎಂದರೆ ಅದರ ಹಿಂದಿನ ಶ್ರಮ ಎಷ್ಟಿದೆ ಎಂದು ಅಂದಾಜಿಸಬಹುದು. ಕಲಾಚೇತನ ಸಂಸ್ಥೆ 25–30 ವರ್ಷ ನಡೆಯುವ ಉಪಕ್ರಮ ಅಲ್ಲ. ಅದು ಪರಿಕ್ರಮ. ನಿತ್ಯ ನಿರಂತರವಾಗಿ ಈ ಸಂಸ್ಥೆ ಸಾಂಸ್ಕೃತಿಕ ಸೇವೆಯನ್ನು ಗದಗ ಪರಿಸರದಲ್ಲಿ ನೀಡುವಂತಾಗಲಿ ಎಂದು ಆಶಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಅಕಾಡೆಮಿಯ ಸಂಸ್ಥಾಪಕ ಕಾ.ವೆಂ. ಶ್ರೀನಿವಾಸಮೂರ್ತಿ, ಕಲಾಚೇತನ ಅಕಾಡೆಮಿ ಕಳೆದ 25 ವರ್ಷಗಳಿಂದ ಕಲೆ, ಸಾಹಿತ್ಯ ಸಂಗೀತ ಕ್ಷೇತ್ರದ ಸಾಧಕರನ್ನು ಗುರುತಿಸಿ ಪ್ರಶಸ್ತಿ ನೀಡುತ್ತಾ ಬಂದಿದೆ. ಕಲಾಚೇತನ ಪ್ರಶಸ್ತಿ ಪಡೆದವರ ಪೈಕಿ ನಾಲ್ವರು ಪದ್ಮಶ್ರೀ ಪ್ರಶಸ್ತಿಗೂ ಭಾಜನರಾಗಿರುವುದು ಅಕಾಡೆಮಿ ಅರ್ಹರನ್ನು ಗುರುತಿಸುತ್ತಿದೆ ಎನ್ನುವುದಕ್ಕೆ ಸಾಕ್ಷಿಯಾಗಿದೆ ಎಂದರು.

ಸಮಾರಂಭದಲ್ಲಿ ಖ್ಯಾತ ಸಿತಾರ್ ವಾದಕ, ಧಾರವಾಡದ ಉಸ್ತಾದ್ ಮೊಹಸಿನ್‌ಖಾನ್ ಹಾಗೂ ಶಿರಸಿಯ ಜೇನು ಕೃಷಿ ಪಂಡಿತ ಮಧುಕೇಶ್ವರ ಹೆಗಡೆ ಅವರಿಗೆ ಕಲಾಚೇತನ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಸಿತಾರ್ ವಾದಕ ಉಸ್ತಾದ್ ಮೊಹಸಿನ್‌ಖಾನ್ ಹಾಗೂ ತಬಲಾ ವಾದಕ ಉಸ್ತಾದ್ ಅವರ ನಾದ ಸಂಭ್ರಮ ಸಂಗೀತ ಕಾರ್ಯಕ್ರಮ ಜನಮನ ರಂಜಿಸಿತು.

ಸಮಾರಂಭದಲ್ಲಿ ಉಸಿರು ಫೌಂಡೇಶನ್ ಸಂಸ್ಥಾಪಕ ಶರಣ್ ಪಾಟೀಲ, ಹಿರಿಯ ಸಾಹಿತಿ ಚಂದ್ರಶೇಖರ ವಸ್ತ್ರದ ವೇದಿಕೆ ಮೇಲಿದ್ದರು. ಕಲಾಚೇತನ ಅಕಾಡೆಮಿ ಸಂಸ್ಥಾಪಕ ಕಾ.ವೆಂ. ಶ್ರೀನಿವಾಸ ಮೂರ್ತಿ, ನರ್ಮದಾ ಭಟ್ ಉಪಸ್ಥಿತರಿದ್ದರು. ಕುಮಾರಿ ಇಬ್ಬನಿ ಪ್ರಾರ್ಥನೆ ಗೀತೆ ಹಾಡಿದರು. ಪ್ರಕಾಶ ಬೇಲಿ ಸ್ವಾಗತಿಸಿದರು. ದತ್ತ ಪ್ರಸನ್ನ ಪಾಟೀಲ ಕಾರ್ಯಕ್ರಮ ನಿರ್ವಹಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka